ಸಂಪುಟ : 9 ಸಂಚಿಕೆ 228 ಪುಟ : 4 ಬೆಲೆ: 3.00 ಶುಕ್ರವಾರ ಅಕ್ಟೋಬರ್ 18 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 228 Pages : 4 Price : 3.00 Friday October 18 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಐಎಂಎ ಪದಾಧಿಕಾರಿಗಳ ಪದಗ್ರಹಣ ಇಂದು




**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ವೈದ್ಯಕೀಯ ಸಂಘದ ಗದಗ ಘಟಕದ 2024–25ನೇ ಸಾಲಿನ ನೂತನ ಅಧ್ಯಕ್ಷರಾಗಿ ಡಾ. ಪ್ರವನ ಪಾಟೀಲ, ಕಾರ್ಯದರ್ಶಿಯಾಗಿ ಡಾ. ತುಕಾರಾಮ ಸೂರಿ, ಮಹಿಳಾ ಘಟಕದ ಅಧ್ಯಕ್ಷರಾಗಿ ಡಾ. ಅನುಪಮಾ ಪಾಟೀಲ, ಕಾರ್ಯದರ್ಶಿಯಾಗಿ ಡಾ. ಶಿಲ್ಪಾ ಧಡೂತಿ ಆಯ್ಕೆಯಾಗಿದ್ದಾರೆ.

ಇವರು ತಮ್ಮ ಇತರ ಪದಾಧಿಕಾರಿಗಳೊಂದಿಗೆ ಅ. 18ರಂದು ಸಂಜೆ 7.30ಕ್ಕೆ ಗದಗ ಸಂಭಾಪೂರ ರಸ್ತೆಯ ಪೋಲೀಸ್ ಭವನದಲ್ಲಿ ನಡೆಯುವ ಸಮಾರಂಭದಲ್ಲಿ ಪದಗ್ರಹಣ ಮಾಡಲಿದ್ದಾರೆ. ಕರ್ನಾಟಕ ಮೆಡಿಕಲ್ ಕೌನ್ಸಿಲ್‌ನ ಗೌರವ ಅಧ್ಯಕ್ಷ ಡಾ. ವೈ.ಸಿ. ಯೋಗಾನಂದ ರೆಡ್ಡಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಅಧಿಕಾರ ಹಸ್ತಾಂತರಿಸುವರು. ಗೌರವಾನ್ವಿತ ಅತಿಥಿಯಾಗಿ ರಾಜ್ಯ ಐಎಂಎ ನಿಯೋಜಿತ ಅಧ್ಯಕ್ಷ ಡಾ. ವ್ಹಿ.ವ್ಹಿ. ಚಿನಿವಾಲರ ಆಗಮಿಸುವರು.

ನಿಕಟಪೂರ್ವ ಅಧ್ಯಕ್ಷ ಡಾ. ಜಿ.ಎಸ್. ಪಲ್ಲೇದ, ಕಾರ್ಯದರ್ಶಿ ಡಾ. ಚಂದ್ರಶೇಖರ ಬಳ್ಳಾರಿ, ಮಹಿಳಾ ಘಟಕದ ಅಧ್ಯಕ್ಷೆ ಡಾ. ಸೋನಿಯಾ ಕರೂರ, ಕಾರ್ಯದರ್ಶಿ ಡಾ. ರಾಧಿಕಾ ಬಳ್ಳಾರಿ ಉಪಸ್ಥಿತರಿರುವರು ಎಂದು ಸಂಘದ ಪ್ರಕಟಣೆ ತಿಳಿಸಿದೆ.

## ಸಮಸ್ಯೆಗಳ ಸರಮಾಲೆ ಸೃಷ್ಟಿಸಿದ ಮಳೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನಾದ್ಯಂತ ಸುರಿಯುತ್ತಿರುವ ಮಳೆಗೆ ರೈತ ಸಮುದಾಯ ನಲುಗಿ ಹೋಗಿದ್ದು, ಜನ ಜೀವನ ಅಸ್ತವ್ಯಸ್ತಗೊಂಡಿದೆ. ಕಳೆದ ಹತ್ತು ದಿನಗಳ ಸತತ ಮಳೆಯಿಂದಾಗಿ ಕೊಯ್ಲಿಗೆ ಬಂದಿರುವ ಶೇಂಗಾ, ಉಳ್ಳಾಗಡ್ಡಿ, ಹತ್ತಿ ಬೆಳೆಗಳು ನೀರು ಮತ್ತು ಭೂಮಿ ಪಾಲಾಗಿ ಕೈಗೆ ಬಂದ ತುತ್ತು ಬಾಯಿಗೆ ಬರದಂತಹ ಸ್ಥಿತಿ ನಿರ್ಮಾಣವಾಗಿದೆ. ಫಸಲು ಹೊರ ತೆಗೆದು ಒಕ್ಕಲಿ ಮಾಡಲು ಮತ್ತು ಮಳೆಯಿಂದ ರಕ್ಷಣೆ ಮಾಡಿಕೊಳ್ಳಲು ಪರದಾಡಿ ಸೋತು ಸುಣ್ಣವಾಗಿದ್ದಾರೆ. ಗುರುವಾರ ಇಡೀ ದಿನ ಗುಡುಗು–ಸಿಡಿಲಬ್ಬರೊಂದಿಗೆ ಸುರಿದ ಮಳೆ ರೈತರನ್ನು ಕಕ್ಕಾಬಿಕ್ಕಿಯಾಗಿಸಿದೆ. ಹೀಗಾದರೆ ಬದುಕು ನಡೆಸುವುದಾದರೂ ಹೇಗೆ ಎಂಬ ಚಿಂತೆ ರೈತರನ್ನು ಕಾಡುತ್ತಿದೆ. ಪಟ್ಟಣ ಸೇರಿ ತಾಲೂಕಿನ ಹಲವು ಗ್ರಾಮಗಳಲ್ಲಿ ಅನೇಕ ಮನೆಗಳು ಕುಸಿದಿವೆ.

ಜಮೀನಿನಲ್ಲಿ ನೀರು ನಿಂತಿದ್ದರಿಂದ ಹಿಂಗಾರಿ ಬಿತ್ತನೆಗೆ ಹಿನ್ನಡೆಯಾಗಿದೆ. ತಾಲೂಕಿನಾದ್ಯಂತ ಮೊದಲೇ ತಗ್ಗು ಗುಂಡಿಗಳಿಂದ ಕೂಡಿರುವ ರಸ್ತೆಗಳಲ್ಲಿ ನೀರು ನಿಂತಿದೆ. ರಸ್ತೆಗೆ ಅಡ್ಡಲಾಗಿ ಹಳ್ಳಗಳು ಹರಿಯುತ್ತಿದ್ದು, ಸಾರಿಗೆ–ಸಂಚಾರಕ್ಕೆ ಸಂಕಷ್ಟ ತಂದೊಡ್ಡಿದೆ. ಕೆಸರಿನಿಂದ ಕೂಡಿದ ರಸ್ತೆಗಳು, ವಿದ್ಯುತ್ ಕಣ್ಣಾಮುಚ್ಚಾಲೆ, ಹೊರ ಹೋಗಲೂ ಬಿಡದ ಮಳೆ, ಸೋರುತ್ತಿರುವ ಮನೆಗಳು, ಒಣಗದ ಬಟ್ಟೆಗಳು, ಜಾನುವಾರುಗಳ ನಿರ್ವಹಣೆಯ ಕಷ್ಟ ಹೀಗೆ ಸಮಸ್ಯೆಗಳ ಸರಮಾಲೆಯಲ್ಲಿ ಜನ ಜೀವನ ಅಸ್ತವ್ಯಸ್ತಗೊಂಡಿದೆ. ಮಳೆರಾಯನ ಬಿಡುವಿಗಾಗಿ ಎಲ್ಲರೂ ಮೊರೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ.

ಗುರುವಾರ ಸಂಜೆ ಪಟ್ಟಣದ ಶಿಗ್ಲಿ ರಸ್ತೆಯ ಮೆಡ್ಲೇರಿ ಸಿದ್ದೇಶ್ವರ ದೇವಸ್ಥಾನ ಬಳಿ ನೆಲೆಯೂರಿದ್ದ ಕುರಿ ಮಂದೆಗೆ ಸಿಡಿಲು ಬಡಿದು 4 ಕುರಿಗಳು ಸಾವನ್ನಪ್ಪಿವೆ. ಇವು ಕುರಿಗಾಯಿಗಳಾದ ನಿಂಗಪ್ಪ ಶರಶೂರಿ, ಸಿದ್ದಪ್ಪ ಬಾಲೇಹೊಸೂರ ಅವರಿಗೆ ಸೇರಿದ ಕುರಿಗಳಾಗಿದ್ದು, ಆಡಳಿತ ಸೂಕ್ತ ಪರಿಹಾರ ನೀಡಬೇಕೆಂದು ಒತ್ತಾಯಿಸಿದ್ದಾರೆ.

## ಟಿಕೆಟ್ ರಹಿತ ಪ್ರಯಾಣಕ್ಕೆ ದಂಡ

**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯಾಪ್ತಿಯ ಧಾರವಾಡ, ಬಾಗಲಕೋಟೆ, ಬೆಳಗಾವಿ, ಗದಗ, ಹಾವೇರಿ ಹಾಗೂ ಉತ್ತರಕನ್ನಡ ಜಿಲ್ಲೆಗಳ 9 ಸಾರಿಗೆ ವಿಭಾಗಗಳ ಹಾಗೂ ಕೇಂದ್ರ ಕಛೇರಿಯ ತನಿಖಾ ಸಿಬ್ಬಂದಿಗಳು ಏಪ್ರಿಲ್–2024ರಿಂದ ಸೆಪ್ಟೆಂಬರ್–2024ರ ಅವಧಿಯಲ್ಲಿ 1,01,630 ತನಿಖೆಗಳನ್ನು ಮಾಡಿದ್ದು, 19,558 ಟಿಕೇಟ್ ರಹಿತ ಪ್ರಯಾಣಿಕರಿಂದ ರೂ. 19,12,626 ದಂಡ ವಸೂಲು ಮಾಡಲಾಗಿದೆ.

ಶಕ್ತಿ ಯೋಜನೆಯಡಿ ರಾಜ್ಯದ ಮಹಿಳಾ ಪ್ರಯಾಣಿಕರಿಗೆ ಉಚಿತ ಪ್ರಯಾಣಕ್ಕೆ ಅವಕಾಶ ಇದೆ. ಆದರೆ ಅವರು ಶೂನ್ಯ ಮೊತ್ತದ 'ಮಹಿಳೆಯರ ಉಚಿತ ಟಿಕೇಟ'ನ್ನು ಪಡೆಯುವದು ಕಡ್ಡಾಯವಾಗಿರುತ್ತದೆ. ಅಲ್ಲದೇ ಮಹಿಳಾ ಪ್ರಯಾಣಿಕರು ತಾವು ಇಳಿಯುವ ಸ್ಥಳಕ್ಕೆ ನಿಖರವಾಗಿ ಟಿಕೇಟನ್ನು ಪಡೆದು ಕೇಳಿ ಪಡೆದುಕೊಳ್ಳಲು ಕೋರಿದೆ.

ಸಾರ್ವಜನಿಕ ಪ್ರಯಾಣಿಕರು ಅಧಿಕೃತ ಟಿಕೇಟ್ ಪಡೆದು ಸಂಸ್ಥೆಯ ವಾಹನಗಳಲ್ಲಿ ಪ್ರಯಾಣಿಸುವಂತೆ ಹಾಗೂ ಸಂಸ್ಥೆಯ ಏಳಿಗೆಗೆ ಸಹಕರಿಸುವಂತೆ ಕೋರಲಾಗಿದೆ.

**ಜಿಲ್ಲಾಡಳಿತದಿಂದ ಹಮ್ಮಿಕೊಂಡಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ**

# ಸಾಧನೆಗೆ ಬಡತನ ಅಡ್ಡಿಯಾಗದು

**■ವಿಜಯಸಾಕ್ಷಿ ಸುದ್ದಿ, ಗದಗ**

ಮಹಾನ್ ತಪಸ್ವಿ ಮಹರ್ಷಿ ವಾಲ್ಮೀಕಿ ಅವರು ರಾಮಾಯಣ ಮಹಾ ಗ್ರಂಥವನ್ನು ರಚಿಸಿ ಲೋಕ ಕಲ್ಯಾಣಕ್ಕಾಗಿ ಅರ್ಪಿಸಿದವರು ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಗದಗ–ಬೆಟಗೇರಿ ನಗರಸಭೆ ಹಾಗೂ ಶ್ರೀ ಮಹರ್ಷಿ ವಾಲ್ಮೀಕಿ ಸಂಘ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾಡಳಿತ ಭವನದಲ್ಲಿ ಏರ್ಪಡಿಸಿದ್ದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವವನ್ನು ಉದ್ಘಾಟಿಸಿ ಮಾತನಾಡಿದರು.

ಮಹರ್ಷಿ ವಾಲ್ಮೀಕಿ ರಾಮಾಯಣವನ್ನು ಕಾವ್ಯರೂಪದಲ್ಲಿ ರಚಿಸಿದ್ದಾರೆ. 2400 ಶ್ಲೋಕಗಳಿರುವ ಈ ಮಹಾ ಗ್ರಂಥವನ್ನು ರಚಿಸಿ ಜಗತ್ಪ್ರಸಿದ್ಧಿ ಹೊಂದಿದವರು ವಾಲ್ಮೀಕಿ ಮಹರ್ಷಿ. ಈ ಮಹಾನ್ ಗ್ರಂಥವನ್ನು ಎಲ್ಲರೂ ಓದಿ ಅರ್ಥೈಸಿಕೊಳ್ಳುವ ಕಾರ್ಯ ಆಗಬೇಕಿದೆ. ಮಹರ್ಷಿ ವಾಲ್ಮೀಕಿಯವರ ಅನೇಕ ದಂತ ಕಥೆಗಳ ಉದಾಹರಣೆಗಳು, ನೀತಿ ಪಾಠಗಳನ್ನು ಜೀವನದಲ್ಲಿ ಅಳವಡಿಸಿಕೊಂಡಲ್ಲಿ ಉತ್ತಮ ಬದುಕು ರೂಪಿಸಿಕೊಳ್ಳಲು ಸಹಕಾರಿಯಾಗಿದೆ ಎಂದು ಹೇಳಿದರು.

ಬಡತನ ಸಾಧನೆಗೆ ಅಡ್ಡಿಯಾಗಲಾರದು.



ಸಮಾಜದಲ್ಲಿ ಅನೇಕರು ಬಡತನದಲ್ಲಿ ಜನಿಸಿದರೂ ಮಹಾನ್ ಸಾಧಕರಾದ ಉದಾಹರಣೆಗಳಿವೆ. ಕೀಳರಿಮೆ ತೊರೆದು ಉನ್ನತ ಮಟ್ಟದಲ್ಲಿ ಆಲೋಚಿಸಿ ಸಾಧನೆ ಮಾಡಲು ಮುಂದಾಗಬೇಕು.

ವಾಲ್ಮೀಕಿ ಸಮಾಜ ಬಾಂಧವರು ದೊಡ್ಡ ದೊಡ್ಡ ಹುದ್ದೆಗಳನ್ನು ಅಲಂಕರಿಸಿ ಸಮಾಜಕ್ಕೆ ತಮ್ಮದೇ ಕೊಡುಗೆಗಳನ್ನು ನೀಡುವಂತಾಗಲಿ ಎಂದು ಎಸ್.ವಿ. ಸಂಕನೂರ ಆಶಿಸಿದರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರ ಮಹರ್ಷಿ ವಾಲ್ಮೀಕಿ ಕುರಿತ ಸಂದೇಶವನ್ನು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ವಾಚಿಸಿದರು.

ನಿಪ್ಪಾಣಿಯ ವಿ.ಎಸ್.ಎಂ.ಜಿ.ಆಯ್. ಬಾಗೇವಾಡಿ ಕಾಲೇಜಿನ ಪ್ರಾಚಾರ್ಯ ಡಾ. ಎನ್.ಎಸ್. ಮಾದಣ್ಣವರ ಶ್ರೀ ಮಹರ್ಷಿ ವಾಲ್ಮೀಕಿ ಆದರ್ಶಗಳ ಕುರಿತು ಉಪನ್ಯಾಸ ನೀಡುತ್ತಾ, ಪ್ರಸ್ತುತ ಕಾಲಘಟ್ಟಕ್ಕೆ ವಾಲ್ಮೀಕಿ ಅವರ ರಾಮಾಯಣ ಕಾವ್ಯ ಗ್ರಂಥ ಹೇಗೆ ಅಳವಡಿಸಿಕೊಳ್ಳಬೇಕು, ಸಮಾಜ ಬಾಂಧವರು ಯಾವ ರೀತಿ ಬದುಕು ರೂಪಿಸಿಕೊಳ್ಳಬೇಕು ಎಂಬುದರ ಕುರಿತು ಉದಾಹರಣೆಯೊಂದಿಗೆ ವಿವರಿಸಿದರು.

ಮುಖ್ಯ ಅತಿಥಿಗಳಾಗಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಗದಗ–ಬೆಟಗೇರಿ ನಗರಸಭೆಯ ಸದಸ್ಯರಾದ ವಿನಾಯಕ ಮಾನ್ವಿ, ನಾಗರಾಜ್ ತಳವಾರ, ನಾಮನಿರ್ದೇಶಿತ ಸದಸ್ಯ ದುರ್ಗೇಶ್ ವಿಭೂತಿ, ಮಹರ್ಷಿ ವಾಲ್ಮೀಕಿ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬೆಳವಾಡಿ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ಉಪ ವಿಭಾಗಾಧಿಕಾರಿ ಗಂಗಪ್ಪ ಎಂ ಹಾಜರಿದ್ದರು.

> ರಾಮಾಯಣ ಹಾಗೂ ಮಹಾಭಾರತ ಗ್ರಂಥಗಳಲ್ಲಿ ನ್ಯಾಯ, ನೀತಿ, ಧರ್ಮದಿಂದ ಬದುಕು ಸಾಗಿಸುವ ಮಾರ್ಗ ಅಡಗಿದೆ. ಮಾನವೀಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಬದುಕು ರೂಪಿಸಿಕೊಳ್ಳುವ ಹಲವಾರು ವಿಷಯಗಳನ್ನ ವಿವರಿಸಲಾಗಿದೆ. ವಾಲ್ಮೀಕಿ ಸಮುದಾಯದ ಬಾಂಧವರು ಪ್ರೀತಿ–ವಿಶ್ವಾಸಕ್ಕೆ ಹೆಸರಾಗಿದ್ದಾರೆ. ಸಂದರ್ಭ ಬಂದರೆ ಜೀವಕ್ಕೆ ಜೀವ ನೀಡಲೂ ಸಿದ್ಧರಾಗುತ್ತಾರೆ ಎಂದು ಎಸ್.ವಿ.ಸಂಕನೂರ ಬಣ್ಣಿಸಿದರು.

> ರಾಮ ರಾಜ್ಯದ ಆದರ್ಶಗಳನ್ನು ಸರ್ಕಾರ ಶಕ್ತಿ, ಗೃಹಲಕ್ಷ್ಮೀ ಯೋಜನೆಗಳ ಮೂಲಕ ಸಾಕಾರಗೊಳಿಸಿದೆ. ಅಲ್ಲದೆ ಮಹಿಳಾ ಮತ್ತು ಮಕ್ಕಳ ಇಲಾಖೆ ಮೂಲಕ ಸ್ತ್ರೀ ಸಬಲೀಕರಣ, ಶಿಕ್ಷಣಕ್ಕಾಗಿ ವಸತಿ ನಿಲಯಗಳನ್ನು ಆರಂಭಿಸಿ ಒತ್ತು ನೀಡಿದೆ. ಶೋಷಣೆ ಮುಕ್ತ ಸಮಾಜ ನಿರ್ಮಾಣಕ್ಕಾಗಿ ಬುದ್ಧ, ಬಸವ, ಅಂಬೇಡ್ಕರರ ಕಾಲದಿಂದಲೂ ಅಪಾರ ಕಾರ್ಯಗಳು ಆಗುತ್ತಾ ಬಂದಿವೆ. ವಾಲ್ಮೀಕಿ ಸಮುದಾಯದ ಮಕ್ಕಳು ಉತ್ತಮ ಶಿಕ್ಷಣ ಪಡೆದು ಸಮಾಜದಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸುವಂತಾಗಬೇಕು, ಸಮಾಜಕ್ಕೆ ತಮ್ಮದೇ ಆದ ಕೊಡುಗೆಗಳನ್ನು ನೀಡಬೇಕು.
>
> **– ಡಾ. ಎನ್.ಎಸ್. ಮಾದಣ್ಣವರ.**
> **ಪ್ರಾಚಾರ್ಯರು, ವಿ.ಎಸ್.ಎಂ.ಜಿ.ಆಯ್.**
> **ಬಾಗೇವಾಡಿ ಕಾಲೇಜು.**

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಮಾಜದ ಮಕ್ಕಳನ್ನು ಗುರುತಿಸಿ ಸನ್ಮಾನಿಸಲಾಯಿತು. ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಪ್ರಾಸ್ತಾವಿಕ ಮಾತನಾಡಿ, ಅತಿಥಿಗಳನ್ನು ಸ್ವಾಗತಿಸಿದರು.

ಡಾ. ವೆಂಕಟೇಶ್ ಆಲ್ಕೋಡ್ ಹಾಗೂ ತಂಡದವರು ನಾಡಗೀತೆ ಹಾಗೂ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ಉಪನ್ಯಾಸಕ ಬಾಹುಬಲಿ ಜೈನರ್ ಕಾರ್ಯಕ್ರಮ ನಿರ್ವಹಿಸಿದರು.



**ಶ್ರೀರಾಮ ಸೇನೆಯಿಂದ ಅ.19ರಂದು ಲಕ್ಷ್ಮೇಶ್ವರ ಬಂದ್: ರಾಜು ಖಾನಪ್ಪನವರ**

# ನಮ್ಮ ಹೋರಾಟವನ್ನು ತಡೆಯಲಾಗದು

**■ವಿಜಯಸಾಕ್ಷಿ ಸುದ್ದಿ, ಗದಗ**

ಲಕ್ಷ್ಮೇಶ್ವರದ ಗೋಸಾವಿ ಸಮಾಜದವರು ಕಳೆದ 4 ದಶಕಗಳಿಂದ ಶ್ರೀ ದುರ್ಗಾದೇವಿ ಮೂರ್ತಿ ಪ್ರತಿಷ್ಠಾಪನೆ ಮಾಡುತ್ತಾ ಬಂದಿದ್ದಾರೆ. ನವರಾತ್ರಿಯ ಕೊನೆಯ ದಿನ ಮೂರ್ತಿ ವಿಸರ್ಜನೆ ಮಾಡಿ ಬರುವಾಗ ಕಿಡಿಗೇಡಿಗಳು ಗೋಸಾವಿ ಸಮುದಾಯದ ಯುವಕರಿಗೆ ಕೇಸರಿ ಶಾಲು ತಗೆಯುವಂತೆ ಆಗ್ರಹಿಸಿ ಹಲ್ಲೆ ಮಾಡಿದ್ದಾರೆ. ಸಮಾಜದವರೆಲ್ಲ ಸೇರಿ ಊರಿನ ಹಿರಿಯರನ್ನು ಸಂಪರ್ಕಿಸಿ ಮರುದಿನ ದೂರು ನೀಡಲು ಹೋದಾಗ ಪಿಎಸ್‌ಐ ಈರಣ್ಣ ರಿತ್ತಿ ದೂರುದಾರರ ಮೇಲೆ ಲಾಠಿ ಪ್ರಹಾರ ಮಾಡಿದ್ದಾರೆ. ಈ ಘಟನೆಯನ್ನು ಖಂಡಿಸಿ ಅ.19ರಂದು ಶ್ರೀರಾಮ ಸೇನೆ ಸಂಘಟನೆಯಿಂದ ಲಕ್ಷ್ಮೇಶ್ವರ ಬಂದ್‌ಗೆ ಕರೆ ನೀಡಲಾಗಿದೆ ಎಂದು ಶ್ರೀರಾಮ ಸೇನಾ ರಾಜ್ಯ ಕಾರ್ಯದರ್ಶಿ ರಾಜೂ ಖಾನಪ್ಪನವರ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಅಕ್ಟೋಬರ್ 19ರಂದು ಪಟ್ಟಣದ ಹಾವಳಿ ಆಂಜನೇಯ ದೇವಸ್ಥಾನದಿಂದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ತಹಸೀಲ್ದಾರ್ ಕಛೇರಿಗೆ ತೆರಳಿ ಮನವಿ




ಸಲ್ಲಿಸಲಾಗುವುದು. ಬೆಳಿಗ್ಗೆ 6 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ಬಂದ್‌ಗೆ ಕರೆ ನೀಡಲಾಗಿದೆ. ಕನ್ನಡಪರ ಹೋರಾಟಗಾರ ಶರಣು ಗೋಡಿ ಹಿಂದೂ ಸಂಘಟನೆಯಲ್ಲಿ ಆಡಿ ಬೆಳೆದಿದ್ದಾರೆ. ಅವರು ಕನ್ನಡ ಪರ ಹೋರಾಟವನ್ನು ಮುಂದುವರೆಸಲಿ. ಆದರೆ, ಕನ್ನಡದ ಬಗ್ಗೆ ಜಾಗೃತಿ ಇರಲಿ. ನಾವು ಹತ್ತಾರು ಸಂಘಟನೆಯಲ್ಲಿ ತೇ–ಲಾಡಗದೇ ಒಂದೇ ಸಂಘಟನೆಯಲ್ಲಿದ್ದು ಹೋರಾಟ ಮಾಡುತ್ತಿದ್ದೇವೆ ಎಂದು ಕಿಡಿ ಕಾರಿದರು.

ಶ್ರೀರಾಮ ಸೇನೆ ಕರೆ ಕೊಟ್ಟಿರುವ ಬಂದ್‌ನಿಂದ ಯಾವುದೇ ಕಾರಣಕ್ಕೂ ಹಿಂದೆ ಸರಿಯುವುದಿಲ್ಲ. ಪೊಲೀಸರು ನಮ್ಮನ್ನು ಬಂಧಿಸಿದರೂ ಸರಿ, ಗಡಿಪಾರು ಮಾಡಿದರೂ ಸರಿ. ನಮ್ಮ ಹೋರಾಟವನ್ನು ತಡೆಯಲು ಆಗುವುದಿಲ್ಲ. ಆದರೆ, ಅಗತ್ಯ ವಸ್ತುಗಳ ವ್ಯಾಪಾರ ವಹಿವಾಟಿಗೆ ಯಾವುದೇ ತೊಂದರೆ ಆಗುವುದಿಲ್ಲ. ಪಟ್ಟಣದಲ್ಲಿರುವ ಎಲ್ಲಾ ಆಸ್ಪತ್ರೆಯ ಒಳ ರೋಗಿಗಳಿಗೆ ಅಕ್ಟೋಬರ್ 19ರಂದು ಶ್ರೀರಾಮ ಸೇನೆ ಸಂಘಟನೆಯಿಂದಲೇ ಊಟದ ವ್ಯವಸ್ಥೆ ಮಾಡುತ್ತೇವೆ ಎಂದು ರಾಜೂ ಖಾನಪ್ಪನವರ ತಿಳಿಸಿದರು.

> ಕನ್ನಡಪರ ಹೋರಾಟಗಾರ ಶರಣು ಗೋಡಿ ಹಲವಾರು ಸಂಘಟನೆಗಳಿಂದ ಬೆಳೆದಿದ್ದಾರೆ. ಆದರೆ, ಅವರು ಕನ್ನಡದ ಹೆಸರು ಹೇಳಿಕೊಂಡು ಇದುವರೆಗೂ ಯಾವುದೇ ಒಂದು ಸಂಘಟನೆಯಲ್ಲಿ ನಿರಂತರವಾಗಿ ಹೋರಾಟ ಮಾಡದೇ ತಮ್ಮ ಅನುಕೂಲಕ್ಕೆ ತಕ್ಕಂತೆ ಸಂಘಟನೆಗಳನ್ನು ಬದಲಿಸುತ್ತಿದ್ದಾರೆ. ಕನ್ನಡಪರ ಸಂಘಟನೆ ಹೆಸರು ಹೇಳಿಕೊಂಡು ಹೋರಾಡುವ ಇವರು ತಮ್ಮ ಮಕ್ಕಳನ್ನು ಪಟ್ಟಣದಲ್ಲಿ ಇಂಗ್ಲಿಷ್ ಮಾಧ್ಯಮ ಶಾಲೆಗೆ ದಾಖಲಿಸಿದ್ದಾರೆ. ಇವರಿಂದ ಕನ್ನಡದ ಬಗೆಗಿನ ಹೋರಾಟವನ್ನು ನಿರೀಕ್ಷಿಸಲು ಹೇಗೆ ಸಾಧ್ಯ?
>
> **– ರಾಜೂ ಖಾನಪ್ಪನವರ.**
> **ಶ್ರೀರಾಮ ಸೇನೆಯ ರಾಜ್ಯ ಕಾರ್ಯದರ್ಶಿ.**

ಈ ಸಂದರ್ಭದಲ್ಲಿ ನಿಖಿಲ್ ಗೋಸಾವಿ, ಸೋಮು ಗುಡಿ, ಕಿರಣ್ ಹಿರೇಮಠ, ವೆಂಕಟೇಶ್ ದೊಡ್ಡಮನಿ, ಈರಣ್ಣ ಪೂಜಾರ, ಪ್ರಾಣೇಶ್ ವ್ಯಾಪಾರಿ, ವಾಸು ಗೋಸಾವಿ, ಮಲ್ಲಿಕಾರ್ಜುನ ಆಳತೋಟದ, ಕಿರಣ್ ಚಿಲ್ಲೂರಮಠ ಉಪಸ್ಥಿತರಿದ್ದರು.

# ಬಂದ್ ಕರೆಯನ್ನು ಬೆಂಬಲಿಸಬೇಡಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಅ.19ರಂದು ಶ್ರೀರಾಮ ಸೇನೆ ಸಂಘಟನೆಯವರು ಕೊಟ್ಟಿರುವ ಲಕ್ಷ್ಮೇಶ್ವರ ಬಂದ್ ಕರೆಗೆ ಯಾರೂ ಬೆಂಬಲಿಸಬಾರದು ಎಂದು ಕರ್ನಾಟಕ ರಕ್ಷಣಾ ವೇದಿಕೆಯ ಸ್ವಾಭಿಮಾನ ಸೇನೆ ಜಿಲ್ಲಾಧ್ಯಕ್ಷ ಶರಣು ಗೋಡಿ, ದಲಿತ ಸಂಘಟನೆಯ ಮುಖಂಡ ಸುರೇಶ ನಂದೆಣ್ಣವರ ತಿಳಿಸಿದರು.

ಅವರು ಗುರುವಾರ ಪಟ್ಟಣದ ಪತ್ರಿಕಾ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಲಕ್ಷ್ಮೇಶ್ವರ ಭಾವೈಕ್ಯತೆಯ ಕೇಂದ್ರವಾಗಿದ್ದು, ಕೆಲವರು ತಮ್ಮ ವೈಯಕ್ತಿಕ ದ್ವೇಷ, ಪ್ರತಿಷ್ಠೆಗಾಗಿ ಶಾಂತಿ ಕದಡುವ ಕಾರ್ಯ ಮಾಡುತ್ತಿದ್ದಾರೆ. ಬಂದ್‌ಗೆ ಬೆಂಬಲ ನೀಡುತ್ತಿರುವ ಶ್ರೀರಾಮಸೇನೆ ಸಂಘಟನೆಯ ರಾಜ್ಯ ಕಾರ್ಯದರ್ಶಿ ರಾಜು ಖಾನಪ್ಪನವರ ಹಲವು ಅಕ್ರಮ




ದಂಧೆ ಮಾಡುತ್ತಿರುವವರ ಬೆಂಬಲದೊಂದಿಗೆ ಹಿಂದೂ ಸಂಘಟನೆಯ ಹೆಸರಿನಲ್ಲಿ ಸಮಾಜ ಒಡೆಯುವ ಕೆಲಸ ಮಾಡುತ್ತಿದ್ದಾರೆ. ಅಲ್ಲದೇ ತಮ್ಮ ಮೇಲೆ ವೈಯಕ್ತಿಕ ದೋಷಾರೋಪ ಮಾಡುತ್ತಿರುವ ಖಾನಪ್ಪನವರನ್ನು ಬಂಧಿಸಬೇಕು. ಅವರಿಗೆ ಹೋರಾಟಕ್ಕೆ ಅವಕಾಶ ಕೊಡಬಾರದು. ದಕ್ಷ ಪೊಲೀಸ್ ಅಧಿಕಾರಿಗಳ ವಿರುದ್ಧ ಕ್ರಮಕ್ಕಾಗಿ ಲಕ್ಷ್ಮೇಶ್ವರ ಬಂದ್ ಮಾಡಲು ನಾವು ಬಿಡುವುದಿಲ್ಲ ಎಂದು ಎಚ್ಚರಿಸಿದರು.

ಈ ಸಚಿದರ್ಭದಲ್ಲಿ ಪದ್ಮರಾಜ ಪಾಟೀಲ, ಮುದಕಣ್ಣ ಗದ್ದಿ, ನೀಲಪ್ಪ ಶೆರಸೂರಿ, ತಿಪ್ಪಣ್ಣ ಸಂಶಿ, ನಾಗೇಶ ಅಮರಾಪುರ, ಮಲ್ಲೇಶ ಪೂಜಾರ, ರಾಮು ಅಡಗಿಮನಿ ಮುಂತಾದವರಿದ್ದರು.

## ಸಚಿವ ಜಮೀರ ಅಹ್ಮದ ಖಾನ್ ನಿರ್ಧಾರ ಸ್ವಾಗತಾರ್ಹ

■ವಿಜಯಸಾಕ್ಷಿ ಸುದ್ದಿ, ಗದಗ



ಅಲ್ಪಸಂಖ್ಯಾತರಿಗಾಗಿ ನಿರ್ಮಾಣಗೊಂಡ ಶಾದಿ ಮಹಲ್‌ಗಳು 3ರಿಂದ 5 ಸಾವಿರ ರೂಗಳ ಬಾಡಿಗೆ ಮಾತ್ರ ಪಡೆದುಕೊಳ್ಳಬೇಕೆಂಬ ವಕ್ಫ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ವಸತಿ ಇಲಾಖೆ ಸಚಿವರಾದ ಝುಮೀರ್ ಅಹ್ಮದ್‌ಖಾನ್ ಅವರ ನಿರ್ಧಾರವನ್ನು ಗದಗ-ಬೆಟಗೇರಿ ನಗರಸಭೆಯ ಮಾಜಿ ಸದಸ್ಯ ಚಾಂದಸಾಬ ಕೊಟ್ಟೂರ್ ಸ್ವಾಗತಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಗದಗ-ಬೆಟಗೇರಿಯಲ್ಲಿ ಸಮುದಾಯ ಭವನವಿದ್ದು, ಸದರಿ ಸಮುದಾಯ ಭವನಗಳು ಅಲ್ಪಸಂಖ್ಯಾತ ಮುಸ್ಲಿಂ ಬಾಂಧವರಿಗೆ ರೂ. 5000 ಬಾಡಿಗೆ ಪಡೆದುಕೊಂಡು ನೀಡುವ ಕ್ರಮ ಕೈಗೊಳ್ಳಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

## ಮಹಾರಾಷ್ಟ್ರ | 200 ಕ್ಷೇತ್ರಗಳಲ್ಲಿ ಮಹಾ ವಿಕಾಸ್ ಅಘಾಡಿ ಒಮ್ಮತ : ಶರದ್ ಪವಾರ್

■ವಿಜಯಸಾಕ್ಷಿ ಸುದ್ದಿ, ಮಹಾರಾಷ್ಟ್ರ



ಮುಂದಿನ ತಿಂಗಳು ನಡೆಯಲಿರುವ ಚುನಾವಣೆಗೆ ಮಹಾರಾಷ್ಟ್ರದ ಒಟ್ಟು 288 ವಿಧಾನಸಭಾ ಸ್ಥಾನಗಳ ಪೈಕಿ 200 ವಿಧಾನಸಭಾ ಸ್ಥಾನಗಳಲ್ಲಿ ಮಹಾ ವಿಕಾಸ್ ಅಘಾಡಿ (ಎಂವಿಎ) ಮಿತ್ರಪಕ್ಷಗಳು ಇದುವರೆಗೆ ಒಮ್ಮತಕ್ಕೆ ಬಂದಿವೆ ಎಂದು ಎನ್‌ಸಿಪಿ (ಎಸ್‌ಪಿ) ಮುಖ್ಯಸ್ಥ ಶರದ್ ಪವಾರ್ ಗುರುವಾರ ಹೇಳಿದ್ದಾರೆ. ಮಹಾರಾಷ್ಟ್ರದ ಸತಾರಾ ಜಿಲ್ಲೆಯ ಕರದ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಹರಿಯಾಣ ಚುನಾವಣೆಯ ಫಲಿತಾಂಶಗಳು, ಬಿಜೆಪಿ ಕೈಯಲ್ಲಿ ಕಾಂಗ್ರೆಸ್ ಹೀನಾಯವಾಗಿ ಸೋತಿದ್ದು, ಮಹಾರಾಷ್ಟ್ರ ಚುನಾವಣೆಯ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ" ಎಂದು ಹೇಳಿದ್ದಾರೆ.

ನಾನು ಸೀಟು ಹಂಚಿಕೆ ಚರ್ಚೆಯಲ್ಲಿ ನೇರವಾಗಿ ಭಾಗಿಯಾಗಿಲ್ಲ. ಎನ್‌ಸಿಪಿ-ಎಸ್‌ಪಿ ರಾಜ್ಯ ಘಟಕದ ಮುಖ್ಯಸ್ಥ ಜಯಂತ್ ಪಾಟೀಲ್ ಅವರು ಮಾತುಕತೆಯಲ್ಲಿ ನಮ್ಮ ಪಕ್ಷವನ್ನು ಪ್ರತಿನಿಧಿಸುತ್ತಿದ್ದಾರೆ. ಅವರು ಹಂಚಿಕೊಂಡ ಮಾಹಿತಿಯ ಪ್ರಕಾರ, ಒಟ್ಟು 288 ಸ್ಥಾನಗಳ ಪೈಕಿ ಸರಿಸುಮಾರು 200 ಸ್ಥಾನಗಳ ಕುರಿತು ಒಮ್ಮತಕ್ಕೆ ಬರಲಾಗಿದೆ" ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದ್ದಾರೆ.ಎನ್‌ಸಿಪಿ (ಎಸ್‌ಪಿ) ಸತಾರಾ ಜಿಲ್ಲೆಯಲ್ಲಿ ಯಾವ ಸ್ಥಾನಗಳಿಗೆ ಬೇಡಿಕೆ ಇಡುತ್ತದೆ ಎಂಬ ಪ್ರಶ್ನೆಗೆ ಅವರು, ಸೀಟು ಹಂಚಿಕೆ ಕುರಿತು ಪಾಟೀಲ್ ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂದು ಹೇಳಿದ್ದಾರೆ. ಮಹಾರಾಷ್ಟ್ರದಲ್ಲಿ ನವೆಂಬರ್ 20 ರಂದು ಚುನಾವಣೆ ನಡೆಯಲಿದ್ದು, ನವೆಂಬರ್ 23 ರಂದು ಮತ ಎಣಿಕೆ ನಡೆಯಲಿದೆ.

ಉದ್ಧವ್ ಠಾಕ್ರೆ ನೇತೃತ್ವದ ಶಿವಸೇನೆ (ಯುಬಿಟಿ), ಕಾಂಗ್ರೆಸ್ ಮತ್ತು ನ್ಯಾಶನಲಿಸ್ಟ್ ಕಾಂಗ್ರೆಸ್ ಪಕ್ಷ (ಶರರ್ ಚಂದ್ರ ಪವಾರ್) ಒಳಗೊಂಡಿರುವ ಎಂವಿಎ ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆ, ಬಿಜೆಪಿ ಮತ್ತು ಅಜಿತ್ ಪವಾರ್ ನೇತೃತ್ವದ ಎನ್‌ಸಿಪಿ ಆಡಳಿತಾರೂಢ ಮಹಾಯುತಿ ಮೈತ್ರಿ ವಿರುದ್ಧ ಹೋರಾಡುತ್ತಿದೆ. ಶಿವಸೇನೆ ಮತ್ತು ಎನ್‌ಸಿಪಿ ಪಕ್ಷಗಳು ಕ್ರಮವಾಗಿ ಜೂನ್ 2022 ಮತ್ತು ಜುಲೈ 2023 ರಲ್ಲಿ ವಿಭಜನೆಯಾದ ನಂತರ ರಾಜ್ಯದಲ್ಲಿ ನಡೆಯುತ್ತಿರುವ ಮೊದಲ ವಿಧಾನಸಭಾ ಚುನಾವಣೆ ಇದಾಗಿದೆ.

ಹರಿಯಾಣ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಸೋಲಿನ ನಂತರ ಇಂಡಿಯಾ ಮೈತ್ರಿಕೂಟದ ಕಾರ್ಯತಂತ್ರದ ಕುರಿತು ಪ್ರಶ್ನೆಗೆ ಪ್ರತಿಕ್ರಿಯಿಸಿದ ಪವಾರ್, ಆ ರಾಜ್ಯದಲ್ಲಿ ಬಿಜೆಪಿ ಆಡಳಿತ ನಡೆಸುತ್ತಿದೆ ಮತ್ತು ಅದು ಅಧಿಕಾರವನ್ನು ಉಳಿಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ ಎಂದು ಹೇಳಿದ್ದಾರೆ.

ನಾವು ಹರಿಯಾಣ ಫಲಿತಾಂಶಗಳನ್ನು ಅಧ್ಯಯನ ಮಾಡುತ್ತಿದ್ದೇವೆ, ಆದರೆ ಅದೇ ಸಮಯದಲ್ಲಿ ಜಮ್ಮು ಕಾಶ್ಮೀರದ ಚುನಾವಣಾ ಫಲಿತಾಂಶಗಳನ್ನು ನೋಡಿ. ಹರಿಯಾಣ ಫಲಿತಾಂಶಗಳು ಮಹಾರಾಷ್ಟ್ರ ಚುನಾವಣೆಗಳ ಮೇಲೆ ಯಾವುದೇ ಪ್ರಭಾವ ಬೀರುವುದಿಲ್ಲ ಎಂದು ನಾನು ಭಾವಿಸುತ್ತೇನೆ. ಜಮ್ಮು ಕಾಶ್ಮೀರಕ್ಕೆ ಸಂಬಂಧಿಸಿದಂತೆ, ವಿಶ್ವ ಸಮುದಾಯವು ಅದರ ಬಗ್ಗೆ ಹೆಚ್ಚಿನ ಗಮನವನ್ನು ನೀಡುತ್ತದೆ ಮತ್ತು ಅದರ ಚುನಾವಣೆಯ ಫಲಿತಾಂಶಗಳು ದೇಶಕ್ಕೆ ಹೆಚ್ಚು ಮಹತ್ವದ್ದಾಗಿದೆ" ಎಂದು ಅವರು ಹೇಳಿದ್ದಾರೆ.

### ಕವನ

## ಮೂರು ದಿನದ ಸಂತೆ

ಬದಕು ಒಂದು ಅರ್ಥವಿಲ್ಲದ ಕಂತೆ
ನಗು ನಗುತ್ತಾ ಮರೆಯಬೇಕು
ಮನದ ಚಿಂತೆ
ಏಕೆಂದರೆ ಈ ಜೀವನವೆಂಬುದು ಬರಿ
ಮೂರು ದಿನದ ಸಂತೆ....!

ತನ್ನೆದೆಯ ದುಗಡ ತನ್ನವರು ಅರಿತಂತೆ
ಅರಿತೆ ಎಂಬ ಭರದಲ್ಲಿ ತನ್ನೆದೆಯ ನೋವನ್ನು
ತನ್ನವರ ಮುಂದೆ ಮರೆಮಾಚಿದಂತೆ
ನಗುವಿನೊಂದಿಗೆ ಸಾಗಲಿ ಬದುಕಿನ ಕಂತೆ
ಏಕೆಂದರೆ ಈ ಜೀವನವೆಂಬುವುದು ಬರಿ
ಮೂರು ದಿನದ ಸಂತೆ....!

ಕಾಣದ ದೇವರಿಗೆ ಕೈ ಮುಗಿಯುವರಂತೆ
ಕಣ್ಣೆದುರೇ ಇರುವ ತನ್ನ ಹೆತ್ತವರ ಬಗ್ಗೆ
ವರ್ತಿಸುವರು ತಿಳುವಳಿಕೆ ಇಲ್ಲದವರಂತೆ
ಬರಿ ಹಣದ ವ್ಯಾಮೋಹದಲ್ಲಿ
ಮನುಷ್ಯತ್ವವನ್ನು ಮರೆತಂತೆ
ಓ ಮನುಜನೆ, ಬದುಕು ನೀ ನಿಸ್ವಾರ್ಥಿಯಂತೆ
ಏಕೆಂದರೆ ಈ ಜೀವನವೆಂಬುವುದು ಬರಿ
ಮೂರು ದಿನದ ಸಂತೆ....!



ನಂಬಿಕೆ ಎಂಬುವುದು ಗಾಜಿನ ಕನ್ನಡಿಯಂತೆ
ಈ ದ್ವೇಷ-ಅಸೂಯೆ ಬೆಂಕಿಯ ಕಿಡಿಯಂತೆ
ಪ್ರೀತಿಸು ಮನವೇ ನೀನು ನಿನ್ನಂತೆ
ಏಕೆಂದರೆ ಈ ಜೀವನವೆಂಬುವುದು ಬರಿ
ಮೂರು ದಿನದ ಸಂತೆ...!

– ಪೂಜಾ ಗ.ಗೊರವನಕೊಳ್ಳ (ಸವದತ್ತಿ)

### ಶ್ರೀ ಜಗದ್ಗುರು ರಂಭಾಪುರಿ ಪೀಠದ ಹುಣ್ಣಿಮೆ ಧರ್ಮ ಸಮಾರಂಭದಲ್ಲಿ ಡಾ.ವೀರಸೋಮೇಶ್ವರ ಶ್ರೀಗಳು

# ಧ್ವನಿ ಬದಲಾದರೆ ಬದುಕೇ ಬದಲಾಗುತ್ತದೆ

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಬದುಕಿನಲ್ಲಿ ಬರುವ ಬಹಳಷ್ಟು ಸಮಸ್ಯೆಗಳು ಸೃಷ್ಟಿಯಾಗುವುದು ನಮ್ಮ ಮಾತಿನ ಧ್ವನಿಯಿಂದ. ಏನು ಹೇಳುತ್ತೇವೆ ಎನ್ನುವುದಕ್ಕಿಂತಲೂ ಹೇಗೆ ಹೇಳುತ್ತೇವೆ ಎಂಬುದೇ ಮುಖ್ಯ. ಧ್ವನಿ ಬದಲಾದರೆ ಬದುಕೇ ಬದಲಾಗುತ್ತದೆ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಜರುಗಿದ ಹುಣ್ಣಿಮೆ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಕತ್ತಲನ್ನು ದೂಷಿಸುವುದರ ಬದಲಾಗಿ ದೀಪ ಬೆಳಗಿದರೆ ಕತ್ತಲು ತಾನಾಗಿ ಹೊರಟು ಹೋಗುತ್ತದೆ. ಗೆದ್ದವರು ಸಂತೋಷದಿಂದ ಇದ್ದರೆ ಸೋತವರು ಯೋಚಿಸುತ್ತಾ ಇರುತ್ತಾರೆ. ಇವೆರಡೂ ಶಾಶ್ವತವಲ್ಲ ಎಂದು ತಿಳಿದವರು ಪ್ರತಿ ದಿನವನ್ನು ಹೊಸತನದೊಂದಿಗೆ ಕಳೆಯುತ್ತಾರೆ. ಬದುಕು ನಾವು ಬದುಕಲಿಕ್ಕೆ ಹೊರತು ಪರರನ್ನು ಮೆಚ್ಚಿಸಲಿಕ್ಕೆ ಅಲ್ಲ. ಎತ್ತರಕ್ಕೆ ಏರಬಯಸುವ ವ್ಯಕ್ತಿ ಏಣಿ ಕಟ್ಟುವ ಕಾರ್ಯದಲ್ಲಿ ನಿರತನಾಗಿರುತ್ತಾನೆ ಹೊರತು ಇನ್ನೊಬ್ಬರ ಏಳ್ಗೆಗೆ ಕಲ್ಲು ಹಾಕುವುದಿಲ್ಲ.



ಶ್ರಮ ಅನ್ನುವುದು ಯಾರನ್ನೂ ಕೊಲ್ಲುವುದಿಲ್ಲ. ಆದರೆ ಚಿಂತೆ ಅನ್ನುವುದು ಬಹಳಷ್ಟು ಜನರನ್ನು ಜೀವಂತವಾಗಿ ಕೊಲ್ಲುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಹೂಲಿ ಶ್ರೀ ಗುರು ಸಿದ್ಧನಂಜೇಶ ವಿರಚಿತ 'ಅದ್ಭುತ ಕಾಲಜ್ಞಾನ' ಕೃತಿಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಬಿಡುಗಡೆ ಮಾಡಿದರು. ಈ ಪವಿತ್ರ ಸಮಾರಂಭದಲ್ಲಿ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯರು, ಮಳಲಿಮಠದ ಡಾ. ನಾಗಭೂಷಣ ಶಿವಾಚಾರ್ಯರು, ಕರ್ಪುರವಳ್ಳಿ ಜಂಗಮ ಮಠದ ಚಂದ್ರಶೇಖರ ಶಿವಾಚಾರ್ಯರು, ಹಾಸನ ತಣ್ಣೀರಹಳ್ಳಿಮಠದ ವಿಜಯಕುಮಾರ ಸ್ವಾಮೀಜಿ, ಮುಳವಾಡ ಹಿರೇಮಠದ ಸಿದ್ಧಲಿಂಗ ಶಿವಾಚಾರ್ಯರು, ಕುಂಟೋಜಿ ಕರವೀರೇಶ್ವರ ಹಿರೇಮಠದ ರುದ್ರಮುನಿ ದೇವರು, ಅರಸೀಕೆರೆ ಕೆ.ವಿ. ನಿರ್ವಾಣಸ್ವಾಮಿ, ಜಿ.ಎನ್. ಷಡಕ್ಷರಿ, ಮುರುಂಡಿ ಶಿವಯ್ಯ, ಹಾಸನದ ಶಿವಕುಮಾರ್ ಕಟ್ಟಾಯ್ ಮೊದಲಾದ ಗಣ್ಯರು ಉಪಸ್ಥಿತರಿದ್ದರು.

ಸೀಗೆ ಹುಣ್ಣಿಮೆ ಪ್ರಯುಕ್ತ ಭೂ ತಾಯಿಗೆ ವಿಶೇಷ ಪೂಜೆ ಜರುಗಿತು. ಪ್ರಾತಃಕಾಲ ಎಲ್ಲ ದೈವಗಳಿಗೆ ವಿಶೇಷ ಪೂಜೆ, ಅಷ್ಟೋತ್ತರ ಮಹಾಮಂಗಲ ಜರುಗಿದವು.

ಸಮಯ, ಸ್ನೇಹ, ಆರೋಗ್ಯ ಮೊದಲಾದವುಗಳಿಗೆ ಬೆಲೆ ಕಟ್ಟಲಾಗದು. ಕಳೆದುಕೊಂಡಾಗಲಷ್ಟೇ ಅವುಗಳ ನಿಜವಾದ ಬೆಲೆ ತಿಳಿಯುತ್ತದೆ. ಪ್ರಪಂಚದಲ್ಲಿ ಎರಡಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ. ತಾಯಿಯ ಪ್ರೀತಿ, ತಂದೆಯ ಜವಾಬ್ದಾರಿ ಎಂಬುದನ್ನು ಮರೆಯುವಂತಿಲ್ಲ. ವೀರಶೈವ ಧರ್ಮ ಸಂವಿಧಾನದಲ್ಲಿ ಜೀವನ ವಿಕಾಸಕ್ಕೆ ಹಾಗೂ ಸುಖ ಶಾಂತಿ ಬದುಕಿಗೆ ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ವಿಚಾರ ಧಾರೆಗಳು ಸರ್ವ ಕಾಲಕ್ಕೂ ಅನ್ವಯಿಸುತ್ತವೆ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ಆಶೀರ್ವಚನ ನೀಡಿದರು.

## ಆನ್‌ಲೈನ್ ಬೆಟ್ಟಿಂಗ್ ನಿಷೇಧಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಆನ್‌ಲೈನ್ ಬೆಟ್ಟಿಂಗ್ ಮತ್ತು ಆನ್‌ಲೈನ್ ಬೆಟ್ಟಿಂಗ್ ಗೇಮ್‌ಗಳಿಂದ ಆಗುತ್ತಿರುವ ಅನಾಹುತಗಳನ್ನು ತಡೆಯುವ ಹಾಗೂ ಆನ್‌ಲೈನ್ ಬೆಟ್ಟಿಂಗ್ ಗೇಮ್ ವೆಬ್‌ಸೈಟ್‌ಗಳನ್ನು ನಿಷೇಧಿಸುವಂತೆ ನಮ್ಮ ಕರ್ನಾಟಕ ಸೇನೆ ಗದಗ ಜಿಲ್ಲಾಧ್ಯಕ್ಷ ಭೀಮಣ್ಣ ಯ.ಇಂಗಳೆ ನೇತೃತ್ವದಲ್ಲಿ ಗದಗ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಭೀಮಣ್ಣ ಇಂಗಳೆ ಮಾತನಾಡಿ, ಹಲವು ವಿದ್ಯಾರ್ಥಿಗಳು, ಯುವಕರು ಆನಲೈನ್ ಬೆಟ್ಟಿಂಗ್ ಮತ್ತು ಆನ್‌ಲೈನ್ ಗೇಮ್‌ಗಳನ್ನು ಚಟವಾಗಿಸಿಕೊಂಡಿದ್ದಾರೆ. ಹಲವಾರು ಕುಟುಂಬಗಳು ಬೀದಿಗೆ ಬಂದಿವೆ.




ಇದರಿಂದ ಹಲವು ಆತ್ಮಹತ್ಯೆಯ ಘಟನೆಗಳೂ ನಡೆದಿವೆ. ಜನರನ್ನು ವಂಚಿಸುತ್ತಿರುವ ಆನ್‌ಲೈನ್ ಗೇಮಿಂಗ್ ವೆಬಸೈಟ್ ಹಾಗೂ ಆ್ಯಪ್‌ಗಳನ್ನು ನಿಷೇಧಿಸುವಂತೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ಪದಾಧಿಕಾರಿಗಳಾದ ಶಾಮೀದ ಮಾಲ್ದಾರ, ಕಳಕಪ್ಪ ಜಿಲಜಿರಿ, ವೀರೇಶ ಶಿವಶಿಂಪಿಗೇರ, ಈರಣ್ಣ ಮ್ಯಾಗೇರಿ, ಪ್ರಕಾಶ ಇಂಗಳೆ, ಯಶವಂತ ಸಾಬಳೆ, ಹನಮಂತ ರೋಣ, ರವಿ ಚಿಂತಾಲ, ಕಳಕಪ್ಪ ಮೋರೆ, ಭೀಮಣ್ಣ ಕಾಟೆ, ಮಹಾಂತೇಶ ಬೂದಿಹಾಳ, ಬಸವರಾಜ ಪೂಜಾರ, ತಾಜು ಮಾಳುತ್ತರ ಯಮನೂರ ಗೌಡ್ರ ಮುಂತಾದವರಿದ್ದರು.

## ತ್ರಿಪುರಾ: ಕಸ್ಟಡಿ ಚಿತ್ರಹಿಂಸೆಯಿಂದಾಗಿ ವ್ಯಕ್ತಿ ಸಾವು, ಐವರು ಪೊಲೀಸ್ ಅಧಿಕಾರಿಗಳ ಬಂಧನ

■ವಿಜಯಸಾಕ್ಷಿ ಸುದ್ದಿ, ತ್ರಿಪುರಾ



ದಕ್ಷಿಣ ತ್ರಿಪುರಾ ಜಿಲ್ಲೆಯ ಸಬ್ರೂಮ್‌ನಲ್ಲಿ ಕಳ್ಳತನದ ಆರೋಪದ ಮೇಲೆ ಬಂಧಿತನಾಗಿದ್ದ 26 ವರ್ಷದ ಯುವಕನೊಬ್ಬ ಪೊಲೀಸ್ ಕಸ್ಟಡಿಯಲ್ಲಿ ಚಿತ್ರಹಿಂಸೆ ನೀಡಿದ ಕಾರಣ ಆತನ ನಿವಾಸದಲ್ಲಿ ಸಾವನ್ನಪ್ಪಿದ್ದಾನೆ ಎಂದು ಅಧಿಕಾರಿಯೊಬ್ಬರು ಗುರುವಾರ ತಿಳಿಸಿದ್ದಾರೆ.

ಸಂತ್ರಸ್ತನ ಕುಟುಂಬದವರು ನೀಡಿದ ಚಿತ್ರಹಿಂಸೆ ದೂರಿನ ಮೇರೆಗೆ ಮನುಬಜಾರ್ ಪೊಲೀಸ್ ಠಾಣೆಯಲ್ಲಿ ನಿಯೋಜಿಸಲಾದ ಐವರು ಪೊಲೀಸ್ ಸಿಬ್ಬಂದಿಯನ್ನು ಬಂಧಿಸಲಾಗಿದೆ ಎಂದು ಸಬ್ರೂಮ್ ಎಸ್‌ಡಿಪಿಒ ನಿತ್ಯಾನಂದ ಸರ್ಕಾರ್ ತಿಳಿಸಿದ್ದಾರೆ.

ಬಂಧಿತ ವ್ಯಕ್ತಿಗೆ ಚಿತ್ರಹಿಂಸೆ ನೀಡಿ ಸಾವಿಗೆ ಕಾರಣರಾದ ಪೊಲೀಸ್ ಸಿಬ್ಬಂದಿಯನ್ನು ಶಿಕ್ಷಿಸಬೇಕೆಂದು ಒತ್ತಾಯಿಸಿ ಸಿಟ್ಟಿಗೆದ್ದ ಸ್ಥಳೀಯರು ಗುರುವಾರ ಪೊಲೀಸ್ ಠಾಣೆ ಬಳಿ ಪ್ರತಿಭಟನೆ ನಡೆಸಿದರು. ಅವರು ಮನುಬ್ಜಾರ್‌ನಲ್ಲಿ ಅಗರ್ತಲಾ-ಸಬ್ರೂಮ್ ರಾಷ್ಟ್ರೀಯ ಹೆದ್ದಾರಿಯಲ್ಲಿ ರಸ್ತೆ ತಡೆ ನಡೆಸಿದರು.

## ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ನೂತನ ಪದಾಧಿಕಾರಿಗಳ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ಜರುಗಿದ ಆಡಳಿತ ಮಂಡಳಿಯ ಸಭೆಯಲ್ಲಿ 2024-2025ನೇ ಸಾಲಿಗೆ ನೂತನ ಪದಾಧಿಕಾರಿಗಳನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಸಂಸ್ಥೆಯ ಎಲ್ಲಾ ಮಾಜಿ ಅಧ್ಯಕ್ಷರುಗಳ ಪರವಾಗಿ ಮೋಹನ ತೋಟಪ್ಪ ಕೋಟಿ ಸಭೆಯಲ್ಲಿ ಆಯ್ಕೆಯನ್ನು ಪ್ರಸ್ತಾಪಿಸಿದರು. ನಂತರ ಆಡಳಿತ ಮಂಡಳಿ ಸದಸ್ಯರು ಸರ್ವಾನುಮತದಿಂದ ಒಪ್ಪಿಗೆ ಸೂಚಿಸಿದರು. ನೂತನ ಅಧ್ಯಕ್ಷರಾಗಿ ತಾತನಗೌಡ ಎಸ್.ಪಾಟೀಲ, ಪ್ರಥಮ





ಉಪಾಧ್ಯಕ್ಷರಾಗಿ ಶರಣಬಸಪ್ಪ ಎಸ್.ಗುಡಿಮನಿ, ದ್ವಿತೀಯ ಉಪಾಧ್ಯಕ್ಷರಾಗಿ ವ್ಹಿ.ಎಸ್. ಮಾಟದಿನ್ನಿ, ತೃತೀಯ ಉಪಾಧ್ಯಕ್ಷರಾಗಿ ಎಸ್.ಆರ್. ನಾಲತ್ವಾಡಮಠ ಆಯ್ಕೆಯಾದರು.

ಗೌರವ ಕಾರ್ಯದರ್ಶಿಗಳಾಗಿ ಅಶೋಕಗೌಡ ಕೆ.ಪಾಟೀಲ, ಸಹ ಗೌರವ ಕಾರ್ಯದರ್ಶಿಗಳಾಗಿ ಸೋಮನಾಥ ಕೆ.ಜಾಲಿ, ರಾಘವೇಂದ್ರ ಎಸ್. ಕಾಲವಾಡ, ಕೋಶಾಧ್ಯಕ್ಷರಾಗಿ ಸಂಜಯ ಬಾಗಮಾರ ಇವರು ಆಯ್ಕೆಯಾಗಿದ್ದಾರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಟ ಸಲ್ಮಾನ್ ಖಾನ್ ಹತ್ಯೆಗೆ ಪಾಕಿಸ್ತಾನದಿಂದ ಶಸ್ತ್ರಾಸ್ತ್ರ ತರಿಸಲು ಸಿದ್ಧತೆ ನಡೆಸಿದ್ದ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್

■ವಿಜಯಸಾಕ್ಷಿ ಸುದ್ದಿ, ಮುಂಬೈ



ಜೈಲಿನಲ್ಲಿರುವ ದರೋಡೆಕೋರ ಲಾರೆನ್ಸ್ ಬಿಷ್ಣೋಯ್ ನೇತೃತ್ವದ ಗ್ಯಾಂಗ್ ನಟ ಸಲ್ಮಾನ್ ಖಾನ್ ಅವರನ್ನು ಕೊಲ್ಲಲು ಗುತ್ತಿಗೆ ತೆ-ಗೆದುಕೊಂಡಿದೆ ಎಂದು ಪೊಲೀಸರು ತಿಳಿಸಿದ್ದಾರೆ ಎಂದು ಎನ್‌ಡಿಟಿವಿ ವರದಿ ಮಾಡಿದೆ. ಈ ಆರೋಪಿಗಳು ಪಾಕಿಸ್ತಾನದಿಂದ ಅತ್ಯಾಧುನಿಕ ಶಸ್ತ್ರಾಸ್ತ್ರಗಳಾದ ಎಕೆ 47, ಎಕೆ 92, ಎಂ 16 ಮತ್ತು ಪಂಜಾಬಿ ಗಾಯಕ ಸಿಧು ಮೂಸೆವಾಲಾ ಅವರನ್ನು ಹತ್ಯೆ ಮಾಡಲಾದ ಟರ್ಕಿ ನಿರ್ಮಿತ ಜಿಗಾನಾ ಆಯುಧವನ್ನು ಖರೀದಿಸಲು ಸಿದ್ಧತೆ ನಡೆಸಿದ್ದರು ಎಂದು ಅವರು ಹೇಳಿದ್ದಾರೆ.

ಆರೋಪಿಗಳು ನಟ ಸಲ್ಮಾನ್ ಖಾನ್ ಅವರನ್ನು ಕೊಲ್ಲಲು 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಹುಡುಗರನ್ನು ನೇಮಿಸಿಕೊಂಡಿದ್ದಾರೆ. ಅವರೆಲ್ಲರೂ ಇದೀಗ ಪುಣೆ, ರಾಯಗಡ, ನವಿ ಮುಂಬೈ, ಥಾಣೆ ಮತ್ತು ಗುಜರಾತ್‌ನಲ್ಲಿ ತಲೆಮರೆಸಿಕೊಂಡಿದ್ದಾರೆ" ಎಂದು ಪೊಲೀಸರು ಹೇಳಿದ್ದಾರೆ. ಆರೋಪಿಗಳು ಮಹಾರಾಷ್ಟ್ರದ ಪನ್ವೇಲ್‌ನಲ್ಲಿರುವ ಸಲ್ಮಾನ್ ಖಾನ್ ಅವರ ಫಾರ್ಮ್‌ಹೌಸ್ ಬಳಿ ಕೊಲ್ಲಲು ಯೋಜಿಸಿದ್ದರು ಎಂದು ನವಿ ಮುಂಬೈ ಪೊಲೀಸರು ಸಲ್ಲಿಸಿದ ಆರೋಪ ಪಟ್ಟಿಯಲ್ಲಿ ತಿಳಿಸಿದ್ದಾರೆ.

### ಬಳಗಾನೂರ ಕೃಷಿ ಪತ್ತಿನ ಸಂಘದ ನೂತನ ಪದಾಧಿಕಾರಿಗಳ ಆಯ್ಕೆ

# 47 ವರ್ಷಗಳ ಬಳಿಕ ಚುನಾವಣೆ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಬಳಗಾನೂರ ಗ್ರಾಮದ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ-ಉಪಾಧ್ಯಕ್ಷರ ಆಯ್ಕೆ ಪ್ರಕ್ರಿಯೆ ನಡೆಯಿತು. ಸಂಘದ ಅಧ್ಯಕ್ಷರಾಗಿ ಪ್ರಭುರಾಜ ಶರಣಪ್ಪಬಸಪ್ಪ ಗೂಳರಡ್ಡಿ, ಉಪಾಧ್ಯಕ್ಷರಾಗಿ ಹನಮಪ್ಪ ಚನ್ನಪ್ಪ ಗಾಣಿಗೇರ ಅವಿರೋಧವಾಗಿ ಆಯ್ಕೆಯಾದರು.

ಈ ಸಂದರ್ಭದಲ್ಲಿ ತಾ.ಪಂ ಮಾಜಿ ಸದಸ್ಯ ಹಾಗೂ ಬಳಗಾನೂರ ಗ್ರಾಮದ ಬಿಜೆಪಿ ಹಿರಿಯ ಮುಖಂಡರಾದ ಶೇಖಪ್ಪ ಅಗಸಿಮನಿ ಮಾತನಾಡಿ, ಬಳಗಾನೂರ ಗ್ರಾಮದ ಕೃಷಿ ಪತ್ತಿನ ಸಹಕಾರಿ ಸಂಘದ ಪ್ರಸಕ್ತ ಸಾಲಿಗೆ ನಡೆದ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷ ಬೆಂಬಲಿತ ಅಭ್ಯರ್ಥಿಗಳು ಜಯಭೇರಿ ಬಾರಿಸಿದ್ದಾರೆ. ಕಳೆದ 1977ನೇ ಸಾಲಿನಲ್ಲಿ ಚುನಾವಣೆ ನಡೆದಿತ್ತು. ಸುಮಾರು 47 ವರ್ಷಗಳ ಬಳಿಕ ಪ್ರಸಕ್ತ ಸಾಲಿನಲ್ಲಿ ಚುನಾವಣೆ ನಡೆದಿರುವದು ಐತಿಹಾಸಿಕ ಬೆಳವಣಿಗೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಪ್ರಭುರಾಜ ಗೂಳರಡ್ಡಿ ಮಾತನಾಡಿ, ಪಕ್ಷದ ಮುಖಂಡರು ಹಾಗೂ ಸಂಘದ ಸದಸ್ಯರು ನನ್ನ ಮೇಲೆ



ವಿಶ್ವಾಸವನ್ನಿಟ್ಟು ಅತ್ಯಂತ ದೊಡ್ಡ ಜವಾಬ್ದಾರಿಯನ್ನ ನೀಡಿದ್ದಾರೆ. ಅದಕ್ಕೆ ಚ್ಯುತಿ ಬಾರದಂತೆ ಎಲ್ಲ ಸದಸ್ಯರನ್ನು, ಪಕ್ಷದ ಮುಖಂಡರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪ್ರಾಮಾಣಿಕವಾಗಿ ಶ್ರಮಿಸುತ್ತೇವೆ ಎಂದು ಹೇಳಿದರು.

ಹನಮಪ್ಪ ಗಾಣಿಗೇರ ಮಾತನಾಡಿ, ಪಕ್ಷದ ಹಿರಿಯರ ಮತ್ತು ಸಂಘದ ಸರ್ವ ಸದಸ್ಯರ ಸಲಹೆಯ ಮೇರೆಗೆ ಗ್ರಾಮದ ರೈತರ ಅಭಿವೃದ್ಧಿ ಕೆಲಸ ಮಾಡುತ್ತೇವೆಂದು ಹೇಳಿದರು.

ಈ ಸಂದರ್ಭದಲ್ಲಿ ಸಂಘದ ಸದಸ್ಯರಾದ ಶಂಕರಗೌಡ ಕಾಶೀಗೌಡ್ರ, ಶೇಖಪ್ಪ ಅಗಸಿಮನಿ, ಬಸನಗೌಡ ಪಾಟೀಲ, ಡಾ.ಶಿವಕುಮಾರ ಹಿರೇಮಠ, ನಿಂಗಪ್ಪ ಮಡಿವಾಳರ, ಹುಲ್ಲಪ್ಪ ಚಲವಾದಿ, ಸಂಗಪ್ಪ ಚವಡಿ, ತಿಪ್ಪಣ್ಣ ಕರಿಭರಮಣ್ಣವರ, ಸರೋಜವ್ವ ಕಡ್ಲಿ, ಮುತ್ತವ್ವ ಮಾಗುಂಡನವರ, ಬಿಜೆಪಿ ಹಿರಿಯ ಮುಖಂಡ ಚನ್ನಯ್ಯ ಶಾಂತಯ್ಯನಮಠ, ಗ್ರಾ.ಪಂ ಸದಸ್ಯರಾದ ಹನಮಪ್ಪ ಕಮಲ್ದಿನ್ನಿ, ಬಿಜೆಪಿ ಮುಖಂಡರಾದ ಶರಣಪ್ಪ ಚಟ್ರಿ, ಅಂದಪ್ಪ ಬೆಟಗೇರಿ, ಪರಸಪ್ಪ ಕರಡ್ಡಿ, ಹನಮರಡ್ಡಿ ಕರಡ್ಡಿ, ಪ್ರಕಾಶ ಮಡಿವಾಳರ, ಬಸವರಾಜ ಚಲವಾದಿ, ಮಂಜುನಾಥ ಪಾಟೀಲ, ದಾದಾಸಾಹೇಬ ಮುಲ್ಲಾ, ಇಸ್ಮಾಯಿಲಸಾಬ ಮುಲ್ಲಾ, ಶಶಿಧರ ಗೂಳರಡ್ಡಿ, ಬಸವರಾಜ ಚವಡಿ, ಮಂಜುನಾಥ ಆರಬಳ್ಳಿನ, ಮಕ್ತುಮಹುಸೇನ ಮುಲ್ಲಾ, ಪ್ರದೀಪ ಗಾಣಿಗೇರ, ಚಂದ್ರು ಕಲಕೇರಿ, ಹನಮಂತ ಚಲವಾದಿ, ಹನಮಂತ ನಡುವಿನಮನಿ, ಸುರೇಶ ಚಲವಾದಿ ಚುನಾವಣಾಧಿಕಾರಿ ಶಾಂತಾ ಎಂ.ಎಚ್, ಮುಖ್ಯ ಕಾರ್ಯದರ್ಶಿ ಅಪ್ಪಣ್ಣ ಶಿವನಪ್ಪನವರ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಬಿಜೆಪಿ ಮುಖಂಡ ಆರ್.ಎನ್. ಪಾಟೀಲ ಮಾತನಾಡಿ, ಗ್ರಾಮದಲ್ಲಿ ಸಂಘದ ಸದಸ್ಯರು ಹಿಂದಿನಿಂದಲೂ ಹಲವಾರು ರೈತಪರ ಕೆಲಸಗಳನ್ನು ಮಾಡುತ್ತಾ ಬಂದಿದ್ದಾರೆ. ಈ ಬಾರಿ ನರಗುಂದ ಮತಕ್ಷೇತ್ರದ ಶಾಸಕ ಸಿ.ಸಿ. ಪಾಟೀಲರ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ಬಿಜೆಪಿ ಬೆಂಬಲಿತ ಅಭ್ಯರ್ಥಿಗಳಿಗೆ ಮಣೆ ಹಾಕಿದ್ದಾರೆ ಎಂದು ಹೇಳಿದರು.

# ಇಡೀ ಪ್ರಪಂಚಕ್ಕೆ ರಾಮಾಯಣ ಪರಿಚಯಿಸಿದ ಮಹಾಕವಿ ಮಹರ್ಷಿ ವಾಲ್ಮೀಕಿ: ಶಿವರಾಜ ತಂಗಡಗಿ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಶ್ರೀ ಮಹರ್ಷಿ ವಾಲ್ಮೀಕಿ ಯವರು ರಾಮಾಯಣ ಇಡೀ ಪ್ರಪಂಚಕ್ಕೆ ಪರಿಚಯಿಸಿದ ಮಹಾಕವಿ ಎಂದು ಸಚಿವ ಶಿವರಾಜ ಸಂಗಪ್ಪ ತಂಗಡಗಿ ಹೇಳಿದರು.

ನಗರದ ಸಾಹಿತ್ಯ ಭವನದಲ್ಲಿ ಗುರುವಾರ ನಡೆದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮಹರ್ಷಿ ವಾಲ್ಮೀಕಿಯವರು ಪ್ರತಿಯೊಬ್ಬ ಪ್ರಜೆಗೂ ಕೂಡಾ ಮಾರ್ಗದರ್ಶನ ಕಾವ್ಯದ ಮೂಲಕ ನೀಡಿದ್ದಾರೆ. ಸಮಾಜದಲ್ಲಿ ಯಾವ ರೀತಿಯಾಗಿ ಬದುಕಬೇಕು ಎಂಬುದನ್ನು ರಾಮಾಯಣದ ಮೂಲಕ ತಿಳಿಸಿದ್ದಾರೆ. ಮಹನೀಯರ ವಿಚಾರಗಳನ್ನು ಹಾಗೂ ಅವರ ಇತಿಹಾಸವನ್ನು ಯುವ ಪೀಳಿಗೆಗೆ ತಿಳಿಸಲು ಜಯಂತಿ ಸರ್ಕಾರದಿಂದ ಹಮ್ಮಿಕೊಳ್ಳಲಾಗುತ್ತದೆ.





ಸಮಾಜವನ್ನು ಒಂದುಕಡೆ ಸೇರಿಸುವ, ಅದರ ಚಿಂತನೆ ಮಾಡುವ ಹಾಗೂ ಸಮಾಜವು ಆರ್ಥಿಕ, ಶೈಕ್ಷಣಿಕ, ಸಾಮಾಜಿಕವಾಗಿ ಯಾವರೀತಿಯಲ್ಲಿದೆ ಎಂಬುವುದರ ಬಗ್ಗೆ ಚರ್ಚೆಗಳನ್ನು ಇಂತಹ ವೇದಿಕೆಗಳ ಮೂಲಕ ಮಾಡುವಂತಹ ಅವಶ್ಯಕತೆಯಿದೆ. ಎಸ್ಸಿ, ಎಸ್ಟಿ ಜನಾಂದವರ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರವು ಮೀಸಲಾತಿ ಪ್ರಮಾಣವನ್ನು ಹೆಚ್ಚಿಸಿದೆ. ವಾಲ್ಮೀಕಿ ಜನಾಂಗದವರು ರಾಷ್ಟ್ರಕ್ಕಾಗಿ ಅಪಾರ ಕೊಡುಗೆ ನೀಡಿದೆ, ಸರ್ಕಾರವು ಎಲ್ಲಾ ವರ್ಗದ ಜನರಿಗಾಗಿ ಹಲವಾರು ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದು, ಅವುಗಳನ್ನು ಸಮಾಜದ ಕಟ್ಟಕಡೆಯ ವ್ಯಕ್ತಿಗಳಿಗೂ ತಲುಪಬೇಕು ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಶಾಸಕ ಕೆ.ರಾಘವೇಂದ್ರ ಹಿಟ್ನಾಳ ಮಾತನಾಡಿ, ಮಹರ್ಷಿ ವಾಲ್ಮೀಕಿ ಯವರ ಜಗತ್ತಿಗೆ ರಾಮಾಯಣವನ್ನು ಕೊಡುಗೆಯಾಗಿ ನೀಡಿದ್ದಾರೆ. ರಾಮಾಯಣ ದರ್ಶನದ ಮೂಲಕ ಸಮಾಜದ ಅಂಕುಡೊಂಕುಗಳನ್ನು ತಿದ್ದುವಂತಹ ಕೆಲಸವನ್ನು ಮಾಡಿದ್ದಾರೆ. ಮನುಕುಲದ ಏಕತೆಯನ್ನು ಸೃಷ್ಟಿಸಿದ್ದಾರೆ. ಬಸವಣ್ಣನವರು, ಕನಕದಾಸರು, ಅಂಬೇಡ್ಕರ್, ಮಹರ್ಷಿ ವಾಲ್ಮೀಕಿಯವರಂತಹ ಅನೇಕ ಮಹನೀಯರು ಸಮಾಜಕ್ಕೆ ಉತ್ತಮ ಕೊಡುಗೆ ನೀಡಿದ್ದು,

**ಮೆರವಣಿಗೆ:**

ಜಯಂತಿ ಅಂಗವಾಗಿ ಶ್ರೀ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರದ ಮೆರವಣಿಗೆಯು ನಗರದ ಸಿರಸಪ್ಪಯ್ಯನಮಠದಿಂದ ಆರಂಭಗೊಂಡು ಗಡಿಯಾರಕಂಬದ ಮಾರ್ಗವಾಗಿ ಅಶೋಕ ವೃತ್ತದ ಮೂಲಕ ಸಾಹಿತ್ಯ ಭವನದವರೆಗೆ ಅದ್ದೂರಿಯಾಗಿ ಜರುಗಿತು.

ಇಂತಹ ಮಹನೀಯರನ್ನು ಒಂದೇ ಸಮುದಾಯಕ್ಕೆ ಸೀಮಿತಗೊಳಿಸಬಾರದು. ಇವರೆಲ್ಲರೂ ಮನುಕುಲದ ಆಸ್ತಿಗಳಾಗಿದ್ದಾರೆ. ಮಹನಿಯರ ಜಯಂತಿ ಆಚರಣೆಯಲ್ಲಿ ಎಲ್ಲಾ ಸಾರ್ವಜನಿಕರ ಪಾಲ್ಗೊಳ್ಳುವಿಕೆ ಅತ್ಯವಶ್ಯಕವಾಗಿದೆ. ವಾಲ್ಮೀಕಿ ಸಮಾಜವು ಶ್ರಮ ಜೀವಿಗಳ ಸಮುದಾಯವಾಗಿದ್ದು, ಇನ್ನೂ ಹಲವು ರೀತಿಯಲ್ಲಿ ಅಭಿವೃದ್ಧಿ ಹೊಂದುವಲ್ಲಿ ಕಾರ್ಯೋನ್ಮುಖವಾಗಬೇಕು ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ ಮಾತನಾಡಿ, ಭಾರತೀಯರ ಜೀವನ ಚರಿತ್ರೆ ಹಾಗೂ ಸಂಸ್ಕೃತಿ ಬಿಂಬಿಸುವ ಮಹಾಕಾವ್ಯ ರಾಮಾಯಣ. ಪ್ರಪಂಚದಲ್ಲಿ ರಾಮಾಣವು ಮಹಾ ಕಾವ್ಯವಾಗಿದೆ. ವಾಲ್ಮೀಕಿ ರಚಿಸಿದ ರಾಮಾಯಣ ಕಾವ್ಯ ಹಾಗೂ ವಾಲ್ಮೀಕಿಯವರ ಬಗ್ಗೆ ಮುಂದಿನ ಪೀಳಿಗೆಗೆ ತಿಳಿಸಬೇಕು. ಸಮುದಾಯದ ಮಕ್ಕಳಿಗೆ ಶೈಕ್ಷಣಿಕ ಸೌಲಭ್ಯಗಳು ಮತ್ತು ಅರ್ಹ ವ್ಯಕ್ತಿಗಳಿಗೆ ಸರ್ಕಾರದ ಸೌಲಭ್ಯಗಳು ಸರಿಯಾಗಿ ಸಿಗುತ್ತಿಲ್ಲ. ಈ ಬಗ್ಗೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು

## ಬಸವೇಶ್ವರ ಮಹಾವಿದ್ಯಾಲಯದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ಥಳೀಯ ಜಗದ್ಗುರು ತೋಂಟ-ದಾರ್ಯ ವಿದ್ಯಾಪೀಠದ ಬಸವೇಶ್ವರ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಮಹಾವಿದ್ಯಾಲಯ ಹಾಗೂ ಶ್ರೀ ತೋಂಟದ ಸಿದ್ಧೇಶ್ವರ ಪ.ಪೂ ಮಹಾವಿದ್ಯಾಲಯದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರಕ್ಕೆ ಪೂಜೆಸಲ್ಲಿಸಿ ಸಿದ್ಧೇಶ್ವರ ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ವಾಯ್.ಎಸ್. ಮತ್ತೂರ ಅವರು ಮಹರ್ಷಿ ವಾಲ್ಮೀಕಿ ಅವರ ಜೀವನ ಮತ್ತು ಸಾಧನೆ ಕುರಿತು ಮಾತನಾಡಿ, ಸಾಮಾನ್ಯ ವ್ಯಕ್ತಿಯೊಬ್ಬ ಶ್ರದ್ಧೆ ಮತ್ತು ಸಜ್ಜನಿಕೆಯ ಗುಣಗಳಿಂದ




ಪರಿವರ್ತನೆ ಹೊಂದಿ ಜಗತ್ತಿಗೆ ರಾಮಾಯಣದಂತಹ ಶ್ರೇಷ್ಠ ಮಹಾಕಾವ್ಯವನ್ನು ಕೊಡುಗೆ ನೀಡುವುದರ ಮೂಲಕ ಜೀವನ ಮೌಲ್ಯಗಳನ್ನು ತಿಳಿಸಿದ್ದಾರೆ. ವಿದ್ಯಾರ್ಥಿಗಳು ಅವರ ಆದರ್ಶಗಳನ್ನು ಪಾಲಿಸಬೇಕೆಂದು ಕಿವಿಮಾತು ಹೇಳಿದರು. ಸಮಾರಂಭದಲ್ಲಿ ವುಹಾವಿದ್ಯಾಲಂಯುಗಳ ಪ್ರಾಚಾರ್ಯರು, ಸಿಬ್ಬಂದಿವರ್ಗ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಪ್ರೊ. ಶಿಲ್ಪಾ ಮ್ಯಾಗೇರಿ ಕಾರ್ಯಕ್ರಮ ನಿರೂಪಿಸಿ, ಸ್ವಾಗತಿಸಿ ವಂದಿಸಿದರು.

## ಉತ್ತಮ ಮೌಲ್ಯಗಳೊಂದಿಗೆ ಮುನ್ನಡೆಯಿರಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಬೂದಿಹಾಳ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಿಸಲಾಯಿತು. ಮಹರ್ಷಿ ವಾಲ್ಮೀಕಿ ಭಾವಚಿತ್ರಕ್ಕೆ ವಾಲ್ಮೀಕಿ ಜನಾಂಗದ ಮುಖಂಡ ಬಸಪ್ಪ ಪೂಜಾರ ಪೂಜೆಯನ್ನು ಸಲ್ಲಿಸಿ ನಮಿಸಿದರು.

ಶಿಕ್ಷಕ ಸಿ.ಕೆ. ಕೇಸರಿ ಮಾತನಾಡಿ, ವಾಲ್ಮೀಕಿ ಮಹರ್ಷಿಗಳು ಸಾರಿರುವ ಸಂದೇಶ ಸರ್ವಕಾಲಿಕ ಸತ್ಯವಾಗಿದೆ. ಅವರ ಜೀವನದ ತತ್ವಾದರ್ಶಗಳನ್ನು ಪಾಲಿಸಬೇಕು. ಉತ್ತಮ ಮೌಲ್ಯಗಳನ್ನು ರೂಢಿಸಿಕೊಂಡು ಮುನ್ನಡೆಯಬೇಕು, ಕೆಟ್ಟ ಗುಣಗಳನ್ನು ಬಿಟ್ಟು ಜೀವನದಲ್ಲಿ ಉನ್ನತ ಮಟ್ಟಕ್ಕೆ ಬೆಳೆಯಬೇಕು. ಇಡೀ ವಿಶ್ವಕ್ಕೆ ರಾಮಾಯಣ ಮಹಾಕಾವ್ಯ




ಭಾರತ ನೀಡಿದ ಅಭೂತಪೂರ್ವ ಸಾಹಿತ್ಯದ ಕೊಡುಗೆಯಾಗಿದೆ.

ಮನುಕುಲಕ್ಕೆ ಸಂಸ್ಕೃತಿಯನ್ನು ಪರಿಚಯಿಸಿದ ಆದಿ ಕವಿ ಮಹರ್ಷಿ ವಾಲ್ಮೀಕಿ ಸಮಾಜದ ಸಮಾನತೆಯನ್ನ ವಿಚಾರಗಳನ್ನು ಐದನೇ ಶತಮಾನದಲ್ಲಿಯೇ ತಿಳಿಸಿದರು ಎಂದರು.

ಈ ವೇಳೆ ಯುಧಿಷ್ಠಿರ ಚಿಗರಿ, ಚನ್ನಬಸಪ್ಪ ಮರಲಿಂಗಣ್ಣವರ, ಶಿವಾನಂದ ಮಡಿವಾಳರ, ಶೇಖಪ್ಪ ಹಡಗಲಿ, ಭೀಮಪ್ಪ ಮರಲಿಂಗಣ್ಣವರ ಮುಂತಾದವರು ಇದ್ದರು. ಮುಖ್ಯ ಶಿಕ್ಷಕ ಬಿ.ವಿ. ದೇಸಾಯಿಪಟ್ಟಿ ಸ್ವಾಗತಿಸಿದರು.

## 'ಶರಣರ ಶಕ್ತಿ' ಚಲನಚಿತ್ರ ಬಿಡುಗಡೆ ಮುಂದೂಡಿಕೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿಶ್ವಗುರು ಬಸವಣ್ಣ ಹಾಗೂ ಚಿನ್ಮಯ ಜ್ಞಾನಿ ಚನ್ನಬಸವಣ್ಣ ಅವರ 12ನೇ ಶತಮಾನದ ಸಮಾನತೆ ಸಾರುವ ಬಹು ನಿರೀಕ್ಷಿತ ಕನ್ನಡ ಚಲನ ಚಿತ್ರ 'ಶರಣರ ಶಕ್ತಿ' ಬಿಡುಗಡೆಯನ್ನು ಮುಂದೂಡಲಾಗಿದೆ.

ಅ.18ರಂದು ರಾಜ್ಯಾದ್ಯಂತ ಬಿಡುಗಡೆ ಆಗಲಿದ್ದ ಚಿತ್ರಕ್ಕೆ ಜಾಗತಿ-ಕ ಲಿಂಗಾಯತ ಮಹಾಸಭಾ, ಮಠಾಧೀಶರು, ಬಸವ ಸಮಿತಿ, ಶರಣ ಸಂಘಟನೆಗಳು ಚಿತ್ರದ ಕುರಿತು ತೀವ್ರ ಆಕ್ಷೇಪಣೆ ವ್ಯಕ್ತಪಡಿಸಿದ್ದರು. ಈ ಹಿನ್ನೆಲೆಯಲ್ಲಿ ಬೆಂಗಳೂರಿನ ಮಲ್ಲೇಶ್ವರಂನಲ್ಲಿ 'ಶರಣರ ಶಕ್ತಿ' ಚಿತ್ರವನ್ನು ನಾಡಿನ ಹೆಸರಾಂತ ಶರಣರು, ಜಗದ್ಗುರುಗಳು, ಗಣ್ಯರು, ಜಾಗತಿಕ ಲಿಂಗಾಯತ ಸಂಘಟನೆಯ ಪ್ರಮುಖರು ವೀಕ್ಷಿಸಿ ಹಲವಷ್ಟು ಸಲಹೆಗಳನ್ನು ನೀಡಿದರು.



ಶ್ರೀಶ ಫಿಲಂಸ್ ಅಡಿಯಲ್ಲಿ ಆರಾಧನಾ ಕುಲಕರ್ಣಿ ಬಂಡವಾಳ ಹೂಡುವ ಜೊತೆಗೆ ಅಕ್ಕ ನಾಗಮ್ಮನ ಪಾತ್ರಕ್ಕೆ ಬಣ್ಣ ಹಚ್ಚಿ ಮನೋಜ್ಞ ಅಭಿನಯ ಮಾಡಿದ್ದಾರೆ. ಪದ್ಮ ವಿಭೂಷಣ ಡಾ.ರಾಜ್‌ಕುಮಾರ್ ಸಂಸ್ಥೆಯ ವಜ್ರೇಶ್ವರಿ ಕಂಬೈನ್ಸ್‌ದಲ್ಲಿ ಕೆಲಸ ಮಾಡಿರುವ ದಿಲೀಪ್ ಶರ್ಮ ಚಿತ್ರಕಥೆ, ಸಂಭಾಷಣೆ, ನಿರ್ದೇಶನ ಅಲ್ಲದೆ ಶರಣ ಮಡಿವಾಳ ಮಾಚಿದೇವರ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ.

ಅ. 18ರಂದು ಚಿತ್ರ ಬಿಡುಗಡೆ ಮಾಡುತ್ತೇವೆ ಎಂದು ಪ್ರಚಾರ ಮಾಡಲಾಗಿತ್ತು. ಆದರೆ ಕೆಲವು ತಾಂತ್ರಿಕ ಕಾರಣಗಳಿಂದ, ಪೂಜ್ಯ ಜಗದ್ಗುರುಗಳ ಸಲಹೆ ಮೇರೆಗೆ ಮುಂದೂಡಲಾಗಿದೆ. ನಂತರದಲ್ಲಿ ಜಗದ್ಗುರುಗಳ ಜೊತೆ ಚರ್ಚಿಸಿ ಚಿತ್ರದ ಬಿಡುಗಡೆ ದಿನಾಂಕ ನಿಗದಿಪಡಿಸಲಾಗುವದು ಎಂದು ಚಿತ್ರದ ನಿರ್ಮಾಪಕಿ ಆರಾಧನಾ ಕುಲಕರ್ಣಿ, ನಿರ್ದೇಶಕರರಾದ ದಿಲೀಪ್ ಶರ್ಮ ತಿಳಿಸಿದ್ದಾರೆ.

## ಬಿ.ಕಾಂ 6ನೇ ಸೆಮಿಸ್ಟರ್ ಫಲಿತಾಂಶ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಮಹಾವಿದ್ಯಾಲಯದ ಶೈಕ್ಷಣಿಕ ಸಾಲಿನ ಬಿ.ಕಾಂ ಕೋರ್ಸಿನ 6ನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ವುಹಾವಿದ್ಯಾಲಂಯುದ ವಿದ್ಯಾರ್ಥಿಗಳಾದ ಸುಷ್ಮಾ ಓಸೇಕಾರ (662 ಅಂಕ) ಪ್ರಥಮ ಸ್ಥಾನ, ಪವನ ಮುದಗಲ್ಲ (638 ಅಂಕ) ದ್ವಿತೀಯ ಸ್ಥಾನ, ಪ್ರಿಯಾ ಹಬೀಬ (633 ಅಂಕ) ತೃತಿಯ ಸ್ಥಾನ, ಭುವನ ಮುದಗಲ್ಲ ಹಾಗೂ ಬಾಸಿಲ (627 ಅಂಕ) 4ನೇ ಸ್ಥಾನ, ಆಸ್ಮಾ (626 ಅಂಕ) 5ನೇ ಸ್ಥಾನ ಪಡೆದಿದ್ದಾರೆ.



ವುಹಾವಿದ್ಯಾಲಂಯುಕ್ಕೆ ಕೀರ್ತಿ ತಂದ ವಿದ್ಯಾರ್ಥಿಗಳ ಸಾಧನೆಯನ್ನು ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ, ಚೇತನ ಕುಡತರಕರ, ಸಂಯೋಜಕರಾದ ಪ್ರೊ. ಅಲ್ವಿನಾ ಡಿ. ಹಾಗೂ ಸಿಬ್ಬಂದಿ ವರ್ಗದವರು ಶ್ಲಾಘಿಸಿದ್ದಾರೆ.

### ಬಸವ ಯೋಗ ಮಂದಿರದಲ್ಲಿ 'ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ'

## ಮಾನಸಿಕ ಆರೋಗ್ಯದಿಂದ ಸಾಧನೆ ಸಾಧ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಯಾವುದೇ ಕಾರ್ಯ ಚಟುವಟಿಕೆಗಳು ಜರುಗಲು ಮೂಲಭೂತವಾಗಿ ಮಾನವನ ಮನಸ್ಸೇ ಕಾರಣ. ಮನಸ್ಸಿದ್ದರೆ ಮಾರ್ಗ ಎಂದು ಹಿರಿಯರು ಹೇಳಿದ್ದಾರೆ. ಇಂದು ಅನಾರೋಗ್ಯ ಮನಸ್ಸುಳ್ಳವರ ಸಂಖ್ಯೆ ದಿನೇ ದಿನೇ ಹೆಚ್ಚುತ್ತಲಿದೆ. ಇದು ಅನೇಕ ಸಮಸ್ಯೆಗಳಿಗೆ ಕಾರಣವಾಗಿದೆ. ಸ್ವಸ್ಥ ಮನಸ್ಸು ಇಲ್ಲದವರು ಅನೇಕ ಅಹಿತ ಕಾರ್ಯಗಳಲ್ಲಿ ತೊಡಗುತ್ತಾರೆ. ಮಹತ್ವದ ಗುರಿ ಸಾಧನೆಗಳ ಬಗ್ಗೆ ಅವರ ಗಮನ ಇರುವುದಿಲ್ಲ. ನಮ್ಮೆಲ್ಲರ ಮನಸ್ಸು ಸ್ವಸ್ಥವಾಗಿದ್ದರೆ ಸಾತ್ವಿಕ ಪರಿಸರ ನಿರ್ಮಾಣವಾಗುವುದು ಮತ್ತು ನಮ್ಮ ಗುರಿ-ಸಾಧನೆಗಳು ಸುಗಮಗೊಳ್ಳುವವು. ಹೀಗಾಗಿ, ಮಾನಸಿಕ ಆರೋಗ್ಯದಿಂದ ಸರ್ವ ಸಾಧನೆ ಸಾಧ್ಯ ಎಂದು ನಿವೃತ್ತ ಮುಖ್ಯೋಪಾಧ್ಯಾಯ ಶಿವನಗೌಡ ಗೌಡರ ಅಭಿಪ್ರಾಯಪಟ್ಟರು.

ಇಲ್ಲಿನ ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ




ಬಸವ ಯೋಗ ಕೇಂದ್ರ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಗದಗ ಇವರು ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ಯೋಗ ಸಾಧಕರು ಸೇರಿ ಹಮ್ಮಿಕೊಂಡಿದ್ದ 'ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಾವು ಪ್ರತಿನಿತ್ಯ ಯೋಗ ಸಾಧನೆ, ಉತ್ತಮ ಗ್ರಂಥಗಳ ಅಧ್ಯಯನ, ಉಪನ್ಯಾಸ ಕೇಳುವ ಹವ್ಯಾಸಗಳನ್ನು ಬೆಳೆಸಿಕೊಂಡರೆ ಮಾನಸಿಕ ಆರೋಗ್ಯ ಪಡೆಯಲು ಸಮರ್ಥರಾಗುತ್ತೇವೆ ಎಂದರು.

ಉಪನ್ಯಾಸಕರು ಮತ್ತು ಯೋಗ ಸಾಧಕರಾದ ಡಾ. ಎಂ.ವಿ. ಐಹೊಳ್ಳಿ ಮಾತನಾಡಿ, ನಾವು ನಮ್ಮ ನಿತ್ಯದ ಜೀವನ ಶೈಲಿಯನ್ನು ಸುಧಾರಿಸಿಕೊಳ್ಳಬೇಕು. ಸಾಧ್ಯವಾದಷ್ಟು ದೈಹಿಕ ಶ್ರಮವಹಿಸಬೇಕು. ಪ್ರಮಾಣಬದ್ಧವಾಗಿ ಉತ್ತಮ ಆಹಾರ ಸೇವಿಸಬೇಕು, ಯಾವಾಗಲೂ ಧನಾತ್ಮಕ ವಿಚಾರ ಹೊಂದಿರಬೇಕು. ಆರೋಗ್ಯವಂತರಾಗಿರಲು ಪ್ರಯತ್ನಿಸಬೇಕೆಂದು ಸೂಚಿಸಿದರು.


ಶೋಭಾ ಮುಳಗುಂದ, ವಿಜಯಾ ಚನ್ನಶೆಟ್ಟಿ, ಸುಲೋಚನಾ ಐಹೊಳ್ಳಿ ಮಾನಸಿಕ ಆರೋಗ್ಯದ ಕುರಿತು ಮಾತನಾಡಿದರು. ಅರುಣಾ ಇಂಗಳಳ್ಳಿ ಪ್ರಾರ್ಥಿಸಿದರು. ಬವಸಯೋಗ ಕೇಂದ್ರದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಸ್ವಾಗತ ಕೋರಿ, ಕಾರ್ಯಕ್ರಮದ ಉದ್ದೇಶಗಳನ್ನು ತಿಳಿಸಿ ಕಾರ್ಯಕ್ರಮ ನಿರೂಪಿಸಿದರು. ಆಶಾ ಚಳಗೇರಿ ವಂದಿಸಿದರು.

## ಮಹಾಪುರುಷರ ಆದರ್ಶಗಳನ್ನು ಪಾಲಿಸಿ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಹುಬ್ಬಳ್ಳಿ ಕೇಂದ್ರ ಕಛೇರಿಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯ ಅಂಗವಾಗಿ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ. ಭಾ.ಆ.ಸೇ, ವವರು ಮಹರ್ಷಿ ವಾಲ್ಮೀಕಿಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು. ಕಾರ್ಯಕ್ರಮವನ್ನು ಉದ್ದೇಶಿಸಿ ವಾತನಾಡಿದ ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಪಿ.ಆರ್. ಕಿರಣಗಿ, ಮಹರ್ಷಿ ವಾಲ್ಮೀಕಿಯವರು ರಚಿಸಿದ ರಾಮಾಯಣವು ಇಡೀ ಜಗತ್ತಿಗೆ ಆದರ್ಶ ಹಾಗೂ ಸಾಂಸ್ಕೃತಿಕ ಮೌಲ್ಯವನ್ನು ತಿಳಿಸುವ ಶ್ರೇಷ್ಠ ಮಹಾಕಾವ್ಯವಾಗಿದೆ.

ಸಾಮಾನ್ಯ ಬೇಟೆಗಾರನಾಗಿದ್ದ



ರತ್ನಾಕರನು ಮಹರ್ಷಿ ವಾಲ್ಮೀಕಿಯಾದ ಬಗೆಯನ್ನು ಸವಿಸ್ತಾರವಾಗಿ ತಿಳಿಸಿ, ಮಹಾಪುರುಷರ ಜಯಂತಿ ಆಚರಣೆಯ ಮೂಲಕ ಅವರ ಆದರ್ಶ, ಮೌಲ್ಯಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ನುಡಿದರು. ಕಾರ್ಯಕ್ರಮದಲ್ಲಿ ಇಲಾಖಾ ಮುಖ್ಯಸ್ಥರಾದ ಪಿ.ವೈ. ನಾಯಕ, ವಿಜಯಶ್ರೀ ನರಗುಂದ, ಗಣೇಶ. ಎಲ್ ರಾಠೋಡ, ಬಸವರಾಜ ಅಮ್ಮನವರ, ಮಾಲತಿ ಎಸ್.ಎಸ್, ಶ್ರೀನಾಥ ಜಿ ಮತ್ತು ಸಂಸ್ಥೆಯ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು. ಸುನೀಲ ಪತ್ರಿ ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

# ನರೇಗಲ್ಲದಲ್ಲಿ ವಾಲ್ಮೀಕಿ ಜಯಂತಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಧರ್ಮಗ್ರಂಥಗಳ ಪ್ರಕಾರ, ಮಹರ್ಷಿ ವಾಲ್ಮೀಕಿಯ ಮೂಲ ಹೆಸರು ರತ್ನಾಕರ. ಅವರ ಜನನಕ್ಕೆ ಸಂಬಂಧಿಸಿದಂತೆ ಸಾಕಷ್ಟು ವಿಭಿನ್ನ ನಂಬಿಕೆಗಳಿವೆ. ಕೆಲವೊಂದು ನಂಬಿಕೆಗಳ ಪ್ರಕಾರ ವಾಲ್ಮೀಕಿಯು ಬ್ರಹ್ಮ ದೇವನ ಮಾನಸ ಪುತ್ರ ಪ್ರಚೇತಾನ ಸಂತಾನವೆಂದು ಹೇಳಲಾಗಿದೆ ಎಂದು ಮುಖ್ಯ ಶಿಕ್ಷಕ ಎಂ.ಬಿ. ಸಜ್ಜನರ ಹೇಳಿದರು.

ಪಟ್ಟಣದ ಅನ್ನದಾನ ವಿಜಯ ಪ್ರೌಢಶಾಲೆಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವದಲ್ಲಿ ಅವರು ಮಾತನಾಡಿದರು.

ತಜ್ಞರ ಪ್ರಕಾರ, ವಾಲ್ಮೀಕಿ ಮಹರ್ಷಿಗಳು ಕಶ್ಯಪ ಮತ್ತು ಚರ್ಷನಿಯ ಮಗನೆಂದು ಹೇಳಲಾಗಿದೆ. ಅವರು ಮಗುವಾಗಿದ್ದಾಗ ಭಿಲಾನಿ ಅವರನ್ನು ಕದ್ದುಕೊಂಡು ಹೋಗುತ್ತಾರೆ. ಅಂದಿನಿಂದ ವಾಲ್ಮೀಕಿ ಮಹರ್ಷಿಗಳು ಭಿಲ್ ಸಮುದಾಯದಲ್ಲಿ ಬೆಳೆದರು. ರತ್ನಾಕರನಾಗಿದ್ದ ವಾಲ್ಮೀಕಿ ಮಹರ್ಷಿಗಳು ನಾರದ ಮುನಿಗಳ ಸೂಚನೆಯಂತೆ ರಾಮ ನಾಮವನ್ನು ಜಪಿಸಲು ಪ್ರಾರಂಭಿಸುತ್ತಾರೆ. ಆದರೆ ಅವರ ಬಾಯಿಂದ ಮರಾ-ಮರಾ ಎಂಬ ಪದಗಳು ಮಾತ್ರ ಹೊರಬರುತ್ತಿದ್ದವು. ಆಗ ರತ್ನಾಕರನು ಒಂದು ಸ್ಥಳದಲ್ಲಿ ಕುಳಿತು ರಾಮನ ನಾಮವನ್ನು ಜಪಿಸಿದನು. ಅವನ ತಪಸ್ಸಿಗೆ ಪ್ರಸನ್ನನಾದ ಬ್ರಹ್ಮನು ಪ್ರತ್ಯಕ್ಷನಾದನು ಮತ್ತು ಅವನ ದೇಹದ ಮೇಲೆ ಬೆಳೆದ ಹುತ್ತವನ್ನು ನೋಡಿ ಅವನು ರತ್ನಾಕರ ವಾಲ್ಮೀಕಿ ಎನ್ನುವ ಹೆಸರನ್ನು ನೀಡಿದನು ಎಂದು ವಿವರಿಸಿದರು.

ಎಂ.ವಿ. ಬಿಂಗಿ. ಎಸ್.ಬಿ. ಬೂದಿಹಾಳ, ಎನ್.ವಿ. ಕೊಡಿಕೊಪ್ಪಮಠ, ಎನ್. ನಿಡಶೇಶಿ, ಡಿ.ಎಸ್. ಬಂಡಿವಡ್ಡರ, ಡಿ.ಎಸ್. ಕೊಳಿವಾಡ ಮುಂತಾದವರು ಪಾಲ್ಗೊಂಡಿದ್ದರು.

### ಮಹಿಳಾ ಸಂಘಟನಾ ಸಭೆಯಲ್ಲಿ ಜಿಲ್ಲಾ ಬ್ರಾಹ್ಮಣ ಸಮಾಜದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ

# ಗದುಗಿನಲ್ಲಿ ಶೀಘ್ರವೇ ವಿಪ್ರ ಮಹಿಳಾ ಸಮಾವೇಶ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶೀಘ್ರದಲ್ಲಿಯೇ ಗದಗ ಜಿಲ್ಲಾ ವಿಪ್ರ ಮಹಿಳಾ ಸಮಾವೇಶವನ್ನು ಗದುಗಿನಲ್ಲಿ ಆಯೋಜಿಸಲಾಗುತ್ತದೆ. ಮಹಿಳೆಯರು ಮತ್ತು ಪುರುಷರು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಸದಸ್ಯತ್ವವನ್ನು ಪಡೆದುಕೊಳ್ಳಬೇಕೆಂದು ಗದಗ ಜಿಲ್ಲಾ ಬ್ರಾಹ್ಮಣ ಸಮಾಜದ ಅಧ್ಯಕ್ಷ ವೆಂಕಟೇಶ ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಗುರುವಾರ ನಡೆದ ಮಹಿಳಾ ಸಂಘಟನಾ ಸಭೆಯಲ್ಲಿ ಅವರು ಮಾತನಾಡಿದರು.

ಮಹಿಳೆಯರು ಒಟ್ಟಾದರೆ ಏನೆಲ್ಲವನ್ನೂ ಸಾಧಿಸಲು ಸಾಧ್ಯವಿದೆ. ಇಂದಿನ ಈ ಸಂಘಟನಾ ಸಭೆಯಿಂದ ಹೊಸತಾದ ಗುರಿಯನ್ನು ಸಾಧಿಸಲು ಎಲ್ಲರೂ ಸಂಕಲ್ಪ ಮಾಡಬೇಕಿದೆ. ಮೊದಲು ನೀವು ಮಹಾಸಭಾದ ಸದಸ್ಯರಾದರೆ, ಅದರಿಂದ ನಿಮಗೆ ಅನೇಕ ಅನುಕೂಲತೆಗಳು ದೊರೆಯುತ್ತವೆ ಎಂದು ಕುಲಕರ್ಣಿ ಹೇಳಿದರು.

ಸಂಘಟನಾ ಕಾರ್ಯದರ್ಶಿ ವಿಜಯ ನಾಡಜೋಷಿ ಮಾತನಾಡಿ, ಮುಂಬರುವ 2025ನೇ ಸಾಲಿನ ಜನೇವರಿ 18 ಮತ್ತು 19ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಬೃಹತ್ ಸುವರ್ಣ



ಮಹೋತ್ಸವ ಜರುಗಲಿದೆ. ಈ ಸಮಾವೇಶದಲ್ಲಿ ನಾಡಿನ ಎಲ್ಲ ವಿಪ್ರ ಬಾಂಧವರೂ ಒಟ್ಟಿಗೆ ಸೇರುವ ಅವಕಾಶವಿದೆ. ಇದರಲ್ಲಿ ನೀವು ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ತಿಳಿಸಿದರು.

ವೇದಿಕೆಯ ಮೇಲೆ ಗದಗ ಜಿಲ್ಲಾ ಸಂಘದ ಕಾರ್ಯದರ್ಶಿ ಅನಿಲ ತೆಂಬದಮನಿ, ತಾರಾ ನಾಡಜೋಷಿ, ಶೈಲಜಾ ಕುಲಕರ್ಣಿ ಉಪಸ್ಥಿತರಿದ್ದರು. ವಿಮಲಾಬಾಯಿ ಗ್ರಾಮಪುರೋಹಿತ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಭೆಯಲ್ಲಿ ಶ್ರೀ ದತ್ತ ಭಕ್ತ ಮಂಡಳಿಯ ಪದಾಧಿಕಾರಿಗಳು, ಸದಸ್ಯರು, ಸನ್ಮತಿ ಸದರಜೋಷಿ, ಪದ್ಮಾ ಕುಲಕರ್ಣಿ, ಜ್ಯೋತಿ ನಾಡಿಗೇರ,ಲಕ್ಷ್ಮಿ ಗ್ರಾಮಪುರೋಹಿತ, ವಿದ್ಯಾ ಗ್ರಾಮಪುರೋಹಿತ, ಸುಶೀಲಾ ಪುರಾಣಿಕ, ಅನಿತಾ ಗ್ರಾಮಪುರೋಹಿತ, ಪ್ರಭಾ ರಾಯಭಟ್ಟನವರ, ಜಯಶ್ರೀ ಗ್ರಾಮಪುರೋಹಿತ, ದೀಪಾ ಕುಲಕರ್ಣಿ, ಪೂಜಾ ಗ್ರಾಮಪುರೋಹಿತ, ವಾಣಿ ಕುಲಕರ್ಣಿ, ಅನಘಾ ಗ್ರಾಮಪುರೋಹಿತ, ಅನುಪಮಾ ಗ್ರಾಮಪುರೋಹಿತ, ರೂಪಾ ಗ್ರಾಮಪುರೋಹಿತ, ಸುಮಾ ಉಡುಪಿ, ಪ್ರಭಾ ಕುಲಕರ್ಣಿ ಮುಂತಾದವರಿದ್ದರು.

ಕಾರ್ಯದರ್ಶಿ ರಘುನಾಥ ಕೊಂಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಭೆಯನ್ನುದ್ದೇಶಿಸಿ ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ, ಸೀಮಾ ಕೊಂಡಿ ಮಾತನಾಡಿದರು. ಪಲ್ಲವಿ ಗ್ರಾಮಪುರೋಹಿತ ಪ್ರಾರ್ಥಿಸಿದರು. ಪರಿಮಳಾ ಗ್ರಾಮಪುರೋಹಿತ ಸ್ವಾಗತಿಸಿದರು. ರಾಜಶ್ರೀ ಕುಲಕರ್ಣಿ ನಿರೂಪಿಸಿದರು. ರೇಣುಕಾ ಗ್ರಾಮಪುರೋಹಿತ ವಂದಿಸಿದರು.

> ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ವತಿಯಿಂದ ನಿಮಗೆ ಸಾಕಷ್ಟು ಆರ್ಥಿಕ ಅನುಕೂಲತೆಗಳಿವೆ. ಇವುಗಳನ್ನು ಬಳಸಿಕೊಂಡು ನೀವು ಅನೇಕ ಕರಕುಶಲ, ಗುಡಿ ಕೈಗಾರಿಕೆ ಮತ್ತು ಉದ್ಯಮಗಳನ್ನು ಸ್ಥಾಪಿಸಿ ಆರ್ಥಿಕ ಸ್ವಾವಲಂಬನೆ ಸಾಧಿಸಬಹುದು. ಮಹಿಳೆ ಆರ್ಥಿಕವಾಗಿ ಸ್ವಾವಲಂಬನೆಯನ್ನು ಹೊಂದಿದರೆ ಆ ಕುಟುಂಬ ಚೆನ್ನಾಗಿರುತ್ತದೆ. ಅದಕ್ಕಾಗಿ ಇಂದಿನ ಈ ಸಂಘಟನೆ ತನ್ನ ಕಾರ್ಯವನ್ನು ಹಮ್ಮಿಕೊಳ್ಳಬೇಕಿದೆ. ಇದಕ್ಕೆ ವಿಜಯಪುರ ಜಿಲ್ಲೆಯ ವಿಪ್ರ ಮಹಿಳೆಯರು ಮಾದರಿಯಾಗಿದ್ದು, ಅವರ ಮಾರ್ಗದರ್ಶನವನ್ನೂ ಪಡೆಯಿರಿ ಎಂದು ವಿಜಯ ನಾಡಜೋಷಿ ತಿಳಿಸಿದರು.

# ಮಹರ್ಷಿ ವಾಲ್ಮೀಕಿ ಜಗತ್ತಿಗೇ ಮಾದರಿ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಕಾರ್ಯಾಲಯದಲ್ಲಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಮುಖ್ಯಅತಿಥಿಗಳಾಗಿ ಆಗಮಿಸಿದ ಬಿಜೆಪಿ ಗದಗ ಜಿಲ್ಲಾಧ್ಯಕ್ಷರಾದ ತೋಟಪ್ಪ(ರಾಜು) ಕುರುಡಗಿ ಮಾತನಾಡಿ, ಶ್ರೀ ಮಹರ್ಷಿ ವಾಲ್ಮೀಕಿ ರಾಮಾಯಣವನ್ನು ಬರೆದು ಜಗತ್ತಿಗೆ ಮಾದರಿಯಾದರು. ಇಂತಹ ಮಹಾನ್ ವ್ಯಕ್ತಿಯ ಜಯಂತ್ಯುತ್ಸವವನ್ನು ಸರ್ವರೂ ಅತ್ಯಂತ ಹೆಮ್ಮೆಯಿಂದ ಆಚರಿಸುವಂತಾಗಲಿ ಎಂದರು.



ಪ್ರಮುಖರಾದ ಎಂ.ಎಸ್. ಕರೀಗೌಡ್ರ, ಈಶಪ್ಪ ನಾಯ್ಕರ, ಬಿಜೆಪಿ ಎಸ್.ಟಿ. ಮೋರ್ಚಾ ಜಿಲ್ಲಾಧ್ಯಕ್ಷ ಈಶ್ವರಪ್ಪ ರಂಗಪ್ಪನವರ ಸಂದರ್ಭೋಚಿತವಾಗಿ ಶ್ರೀ ಮಹರ್ಷಿ ವಾಲ್ಮೀಕಿಯವರ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ವಕ್ತಾರರಾದ ಎಂ.ಎಂ. ಹಿರೇಮಠ, ಪ್ರಶಾಂತ ನಾಯ್ಕರ, ಅನಿಲ ಅಬ್ಬಿಗೇರಿ, ಜಗನ್ನಾಥಸಾ ಭಾಂಡಗೆ, ಅಶೋಕ ಸಂಕಣ್ಣವರ, ರಮೇಶ ಸಜ್ಜಗಾರ, ನಾಗರಾಜ ತಳವಾರ, ಶಂಕರ ಕಾಕಿ, ಕೆ.ಪಿ. ಕೋಟಿಗೌಡ್ರ, ಸಂತೋಷ ಅಕ್ಕಿ, ಮಾಂತೇಶ ಬಾತಾಖಾನಿ, ಎಸ್.ಪಿ. ಚವಡಿ, ರಂಗಪ್ಪ ಯರಗುಡಿ, ರೇಖಾ ಬಂಗಾರಶೆಟ್ರ, ಯೋಗೇಶ್ವರಿ ಭಾವಿಕಟ್ಟಿ, ಮಂಜುನಾಥ ಎಲಿಸುರ, ಜಗದೀಶ ತಳವಾರ, ಆನಂದ ಬೆಳದಡಿ, ಶರಣಪ್ಪ ತಳಕಲ, ರಾಮಣ್ಣ ರಣತೂರ, ಪಕ್ಕೀರಪ್ಪ ಮಾದಣ್ಣವರ, ಅರವಿಂದ ಅಣ್ಣಿಗೇರಿ, ವಿನೋದ ಹಂಸನೂರ ಮುಂತಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಎಸ್.ಟಿ. ಮೋರ್ಚಾ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಾಯ್.ಪಿ. ಅಡ್ನೂರ ನಿರೂಪಿಸಿದರು. ಯಲ್ಲಪ್ಪ ಶೀರಿ ವಂದಿಸಿದರು.

# ಮಳೆಯ ನಡುವೆಯೇ ಭೂತಾಯಿಗೆ ಸೀಮಂತ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸೀಗಿ ಹುಣ್ಣಿಮೆಯಲ್ಲಿ ಉತ್ತರ ಕರ್ನಾಟಕ, ಬಯಲು ಸಿಮೆಯ ರೈತರು ಸಡಗರ-ಸಂಭ್ರಮದಿಂದ ಭೂತಾಯಿಗೆ ಸೀಮಂತ ಮಾಡಿ, ಉಡಿ ತುಂಬುವ ಮೂಲಕ ನಮಿಸುತ್ತಾರೆ. ಗೋವಿನಜೋಳ, ಹತ್ತಿ, ಮೆಣಸಿನಕಾಯಿ ಬೆಳೆಗಳಿಂದ ತನ್ನ ಒಡಲನ್ನು ತುಂಬಿಕೊಂಡು ಭೂತಾಯಿ ಗರ್ಭ ಧರಿಸುತ್ತಾಳೆ.

ಭೂತಾಯಿಗೆ ಸೀಮಂತ ಮಾಡಿ ಬಯಕೆ ತೀರಿಸಬೇಕು ಎನ್ನುವ ಹಂಬಲದಿಂದ ಉತ್ತರ ಕರ್ನಾಟಕದ ರೈತ ಬಾಂಧವರು ಈ ಸೀಗಿ ಹುಣ್ಣಿಮೆಯನ್ನು ಅತ್ಯಂತ ಸಡಗರ-ಸಂಭ್ರಮದಿಂದ ಆಚರಣೆ ಮಾಡುತ್ತಾರೆ.



ಪ್ರಸ್ತುತ ವರ್ಷ ಹಿಂಗಾರು ಮಳೆಯ ಹಸ್ತಾ ಹಾಗೂ ಚಿತ್ತಿ ಮಳೆ ಸತತವಾಗಿ ಸುರಿಯುತ್ತಿದ್ದು, ಮಳೆಯ ನಡುವೆಯೇ ರೈತ ಬಾಂಧವರು ಭೂತಾಯಿಗೆ ಸೀಮಂತ ಕಾರ್ಯ ನೆರವೇರಿಸಿದರು. ಹಸಿರು ಸೀರೆಯನ್ನು ಬನ್ನಿ ಮರಕ್ಕೆ ಉಡಿಸಿ, ಪಾಂಡವರ ಹಾಗೂ ಕಳ್ಳ ಕಲ್ಲು ಮೂರ್ತಿಗಳನ್ನು ಪೂಜಿಸುವ ಮೂಲಕ ಮಹಿಳೆಯರು ಸೇರಿದಂತೆ ಮಕ್ಕಳು ಭೂತಾಯಿಗೆ ಚರಗ ಚೆಲ್ಲುತ್ತಾ ನಮಿಸಿದರು.

# ಶಿಕ್ಷಣಕ್ಕಾಗಿ ಆರ್ಥಿಕ ನೆರವು




■ವಿಜಯಸಾಕ್ಷಿ ಸುದ್ದಿ, ಗದಗ

ಕೆ.ಎಲ್.ಇ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಉಪನ್ಯಾಸಕರಾದ ಐ.ಬಿ. ಪಾಟೀಲರು ಇನ್ನರ್‌ವ್ಹೀಲ್ ಸಂಸ್ಥೆಯನ್ನು ಸಂಪರ್ಕಿಸಿ ಪಿಯುಸಿ ಬೋರ್ಡ್ ಪರೀಕ್ಷೆಯಲ್ಲಿ ಶೇ. 97.5 ಅಂಕ ಗಳಿಸಿದ ತಮ್ಮ ವಿದ್ಯಾರ್ಥಿನಿ ಬಸಮ್ಮ ಜಗ್ಗಲ್‌ಗೆ ಶಿಕ್ಷಣ ಮುಂದುವರಿಸಲು ಆರ್ಥಿಕ ನೆರವು ನೀಡುವಂತೆ ಕೋರಿದ್ದರು. ಈ ಕೋರಿಕೆಗೆ ಸ್ಪಂದಿಸಿದ ಇನ್ನರ್‌ವ್ಹೀಲ್ ಸಂಸ್ಥೆಯ ಅಧ್ಯಕ್ಷೆ ನಾಗರತ್ನ ಮಾರನಬಸರಿಯವರು ತಮ್ಮ ಪುತ್ರಿ ಗ್ರೀಷ್ಮಾ ಮಾರನಬಸರಿ (ಕೋಟಿ)ಯವರಿಂದ 5 ಸಾವಿರ ರೂ ಹಣವನ್ನು ವಿದ್ಯಾರ್ಥಿನಿಗೆ ನೀಡಿ ಆಕೆಯ ಭವಿಷ್ಯವನ್ನು ನಿರೂಪಿಸುವಲ್ಲಿ ಸಹಾಯ ಹಸ್ತ ಚಾಚಿದರು.

ಈ ಸಂದರ್ಭದಲ್ಲಿ ಇನ್ನರ್ ವ್ಹೀಲ್ ಜಿಲ್ಲೆ-317ರ ಮಾಜಿ ಚೇರಮನ್ ಪ್ರೇಮಾ ಗುಳಗೌಡರ ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಕೆ.ಎಲ್.ಇ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ ಹಾಗೂ ವಿದ್ಯಾರ್ಥಿನಿ ಬಸಮ್ಮ ಜಗ್ಗಲ್ ಪರವಾಗಿ ಉಪನ್ಯಾಸಕ ಐ.ಬಿ. ಪಾಟೀಲ ಇನ್ನರ್‌ವ್ಹೀಲ್ ಸಂಸ್ಥೆಯ ಸರ್ವ ಸದಸ್ಯರಿಗೆ ಧನ್ಯವಾದಗಳನ್ನು ತಿಳಿಸಿದರು. ಇನ್ನರ್‌ವ್ಹೀಲ್ ಸಂಸ್ಥೆ ಗದಗ-ಬೆಟಗೇರಿಯ ಕಾರ್ಯದರ್ಶಿ ವೀಣಾ ತಿರ್ಲಾಪೂರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಐಎಸ್‌ಓ ಪುಷ್ಪಾ ಭಂಡಾರಿ, ಸದಸ್ಯರಾದ ಶ್ರಿಯಾ ಪವಾಡಶೆಟ್ಟರ, ಸುಮಾ ಪಾಟೀಲ, ಮಂಗಳಾ ಅಬ್ಬಿಗೇರಿ, ನಾಗರತ್ನ ಪಾಟೀಲ, ಪೂಜಾ ಭೂಮಾ, ನೀಲಾಂಬಿಕಾ ಉಗಲಾಟ, ಸುಲೋಚನ ಐಹೊಳಿ, ಆಶಾ ಹುಕ್ಕೇರಿ, ರೇಷ್ಮಾ ಬಸರಿಗಿಡದ, ಸಂಧ್ಯಾ ಕೋಟಿ, ಸುಶಿಲಾ ಕೋಟಿ, ಕಸ್ತೂರಬಾಯಿ ಹಿರೇಗೌಡರ ಮುಂತಾದವರು ಉಪಸ್ಥಿತರಿದ್ದರು.

### ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ತಹಸೀಲ್ದಾರ ವಾಸುದೇವ ಸ್ವಾಮಿ

# ಮಹರ್ಷಿ ವಾಲ್ಮೀಕಿ ಶ್ರೇಷ್ಠ ದಾರ್ಶನಿಕರು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಗತ್ತಿನ ಶ್ರೇಷ್ಠ ಕಾವ್ಯಗಳಲ್ಲೊಂದಾದ ರಾಮಾಯಣ ಮಹಾಕಾವ್ಯ ಬರೆದ ವಾಲ್ಮೀಕಿ ಮಹರ್ಷಿಗಳು ದೇಶದ ಹೆಮ್ಮೆ. ಸರ್ವ ಜನಾಂಗದ ಆದರಣೀಯರಾದ ಅವರನ್ನು ವಾಲ್ಮೀಕಿ ಜನಾಂಗಕ್ಕೆ ಸೀಮಿತಗೊಳಿಸಬಾರದು. ಅವರ ಜೀವನ ಮೌಲ್ಯಗಳು ಎಲ್ಲ ಜನಾಂಗಕ್ಕೂ ದಾರಿದೀಪ ಎಂದು ತಹಸೀಲ್ದಾರ ವಾಸುದೇವ ಎಂ.ಸ್ವಾಮಿ ಹೇಳಿದರು.

ಅವರು ಗುರುವಾರ ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ವಾಲ್ಮೀಕಿ ಜಯಂತಿ ಆಚರಣೆ ಸಂದರ್ಭದಲ್ಲಿ ಮಾತನಾಡಿದರು.

ಸಾಧನೆ, ತಪೋಬಲದಿಂದ ಭಾರತದ ಭವ್ಯ ಸಂಸ್ಕೃತಿಯ ಪ್ರತೀಕವಾಗಿರುವ ರಾಮಾಯಣ ದಂತಹ ಶ್ರೇಷ್ಠ ಮಹಾಕಾವ್ಯ



ವಾಲ್ಮೀಕಿ ಮಹರ್ಷಿಗಳು ಭಾರತಕ್ಕೆ ಕೊಟ್ಟ ಶ್ರೇಷ್ಠ ಕೊಡುಗೆಯಾಗಿದೆ. ಅವರು ತಿಳಿಸಿದ ಬದುಕಿನ ಮೌಲ್ಯಗಳು ನಾಗರಿಕ ಸಮಾಜಕ್ಕೆ ದಾರಿದೀಪವಾಗಿವೆ. ಸಮಾಜಕ್ಕೆ ಶ್ರೇಷ್ಠವಾದುದನ್ನು ನೀಡಿದ ದಾರ್ಶನಿಕರು. ಅಂತಹ ಮಹಾತ್ಮರನ್ನು ಯಾವುದೇ ಒಂದು ಜಾತಿಗೆ ಸೀಮಿತಗೊಳಿಸುವುದು ತರವಲ್ಲ ಎಂದು ಹೇಳಿದರು.

ಈ ವೇಳೆ ಸಮಾಜದ ಹಿರಿಯರು, ನಿವೃತ್ತ ಸಮಾಜ ಕಲ್ಯಾಣ ಅಧಿಕಾರಿ ಬಿ.ಎನ್. ರಾಟಿ ಮಾತನಾಡಿ, ಸಾಧಿಸುವ ಛಲ ಮತ್ತು ಆತ್ಮಬಲದಿಂದ ಶ್ರೇಷ್ಠವಾದುದನ್ನು ಸಾಧಿಸಬಹುದು ಎಂಬುದಕ್ಕೆ ವಾಲ್ಮೀಕಿ ಮಹರ್ಷಿಗಳು ಸಾಕ್ಷಿಯಾಗಿದ್ದಾರೆ. ದೇಶದ ಸ್ವಾತಂತ್ರಕ್ಕಾಗಿ ನಾಡು-ನುಡಿಯ ರಕ್ಷಣೆಗಾಗಿ ವಾಲ್ಮೀಕಿ ಜನಾಂಗದ ಕೊಡುಗೆ ಅಪಾರ. ಇತ್ತೀಚಿನ ದಿನಮಾನಗಳಲ್ಲಿ ಜಾತಿ, ಧರ್ಮದ ಹೆಸರಿನಲ್ಲಿ ಸಮಾಜವನ್ನು ಒಡೆಯುವ ಮತ್ತು ದಾರಿ ತಪ್ಪಿಸುವ ಪ್ರಯತ್ನ ನಡೆಯುತ್ತಿದ್ದು, ಇದಕ್ಕೆ ಯಾರೂ ಕಿವಿಗೊಡಬಾರದು. ಇತರೇ ಸಮಾಜದವರೊಂದಿಗೆ ಸೌಹಾರ್ದತೆಯೊಂದಿಗೆ ಬದುಕುವ ಜೊತೆಗೆ ಸಮಾಜದ ಬಡವರ, ಅಸಹಾಯಕರನ್ನೂ ಮೇಲಕ್ಕೆತ್ತುವ ಮಾನವೀಯ ಮೌಲ್ಯಗಳನ್ನು ರೂಡಿಸಿಕೊಳ್ಳಬೇಕು ಎಂದು ಹೇಳಿದರು.

ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಸಮಾಜ ಕಲ್ಯಾಣ ಇಲಾಖೆಯ ಹೆಚ್.ಎಂ. ಅರಳಿಕಟ್ಟಿ, ವಾಲ್ಮೀಕಿ ಸಮಾಜದ ತಾಲೂಕಾಧ್ಯಕ್ಷ ಭೀಮಣ್ಣ ಯಂಗಾಡಿ, ರಾಜು ಓಲೇಕಾರ, ಕೆ.ಓ. ಹುಲಿಕಟ್ಟಿ, ಕಲ್ಲಪ್ಪ ಗಂಗಣ್ಣವರ, ರಾಮಣ್ಣ ಕಲಕೋಟಿ, ಮಾಂತೇಶ ಹುಣಸಿಕಟ್ಟಿ, ನಾಗರಾಜ ಹಾವಳಕೇರಿ, ಹನಮಂತ ಜಾಲಿಮರದ, ಚನ್ನಪ್ಪ ಬೆಟಸೂರ, ರಮೇಶ ದೊಡ್ಡಮನಿ, ಗಣೇಶ ಬಾಲೆಹೊಸೂರ, ಕಿರಣ ಉಳ್ಳಟ್ಟಿ, ಮಂಜಣ್ಣ ಶಿರಹಟ್ಟಿ, ನಿಂಗಪ್ಪ ಪ್ಯಾಟಿ ಸೇರಿ ತಹಸೀಲ್ದಾರ ಕಚೇರಿಯ ಸಿಬ್ಬಂದಿಗಳು ಇದ್ದರು.

### ಸೀಗಿ ಹುಣ್ಣಿಮೆ ಸಂಭ್ರಮಕ್ಕೆ ಅಡ್ಡಿಯಾದ ಮಳೆ । ಸಂಕ್ಷಿಪ್ತವಾಗಿ ಹಬ್ಬ ಆಚರಿಸಿದ ರೈತರು

# ಭೂಮಿಪುತ್ರನ ಖುಷಿ ಕಸಿದ ವರುಣ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮುಂಗಾರಿನ ಫಸಲಿನ ಒಕ್ಕಲಿಯ ಜತೆಗೆ ಹಿಂಗಾರಿಗೆ ಭೂಮಿತಾಯಿಗೆ ಉಡಿ ತುಂಬುವ ಅನ್ನದಾತನ ಸಂಪ್ರದಾಯದ ಆಚರಣೆಗೆ ಕಳೆದ ವರ್ಷ ಗ್ರಹಣದ ದಿನವಾಗಿತ್ತು. ಈ ವರ್ಷ ಸೀಗಿ ಹುಣ್ಣಿಮೆ ದಿನ ಸಿಡಿಲು-ಗುಡುಗು, ಮಳೆಯ ಆರ್ಭಟ, ಮೋಡ ಮುಸುಕಿದ ವಾತಾವರಣದಿಂದ ರೈತರ ಸಂಭ್ರಮಕ್ಕೆ ಗ್ರಹಣ ಹಿಡಿದಂತಾಯಿತು.

ಕಳೆದ 10-12 ದಿನಗಳಿಂದ ಸುರಿಯುತ್ತಿರುವ ಮಳೆಗೆ ಕೈಗೆ ಬಂದಿದ್ದ ಮುಂಗಾರಿನ ಬೆಳೆಗಳು ಹಾಳಾಗಿವೆ. ಈಗಾಗಲೇ ಬಿತ್ತನೆ ಮಾಡಿರುವ ಹಿಂಗಾರಿನ ಬೀಜ ಮೊಳಕೆ ಹಂತದಲ್ಲಿಯೇ ಕೊಳೆತಿದೆ. ಹಲವು ಸಂಕಷ್ಟದ



ನಡುವೆಯೂ ರೈತ ಸಮುದಾಯ ಭೂತಾಯಿಗೆ ಉಡಿ ತುಂಬಿ ಚರಗ ಚೆಲ್ಲುವ ಸೀಗಿ ಹುಣ್ಣಿಮೆ ಹಬ್ಬದ ಸಂಪ್ರದಾಯ ಅನಿವಾರ್ಯತೆಯ ನಡುವೆಯೇ ಸಂಕ್ಷಿಪ್ತವಾಗಿ ಆಚರಿಸಿದರು.

ಗುರುವಾರ ಹಬ್ಬದ ದಿನವಂತೂ ಬೆಳಿಗ್ಗೆಯಿಂದ ಸಂಜೆವರೆಗೆ ಸುರಿದ ಸೋನೆಮಳೆಯಿಂದ ಜನರು ಹೊರಗೆ ಬರಲಾರದ ಪರಿಸ್ಥಿತಿ ನಿರ್ಮಾಣವಾಗಿತ್ತು. ಮಧ್ಯಾಹ್ನ ಕೊಂಚ ಬಿಡುವಿನ ನಡುವೆ ರೈತರು ಹೊಲಕ್ಕೆ ಹೋಗಿ ಪೂಜೆ ಸಲ್ಲಿಸಿ ಬಂದು ಮನೆಯಲ್ಲಿಯೇ ಊಟ ಮಾಡಿದರು. ಸಂಜೆ ಮತ್ತೆ ಗುಡುಗು-ಸಿಡಿಲ ಅಬ್ಬದ ಮಳೆಗೆ ಜನಸಮುದಾಯ ನಲುಗಿದೆ. ಕೊಯ್ಲಿಗೆ ಬಂದಿರುವ ಫಸಲು ಮತ್ತು ಬಿತ್ತನೆ ಮಾಡಿರುವ, ಮಾಡಬೇಕಾದ ಜಮೀನುಗಳೆಲ್ಲ ಜಲಾವೃತಗೊಂಡು ರೈತರ ಬದುಕು ಮೂರಾಬಟ್ಟೆಯಾದಂತಾಗಿದೆ. ವಾಯುಭಾರ ಕುಸಿತದಿಂದ ಇನ್ನೂ 3-4 ದಿನ ಮಳೆ ಸ್ಮರಿಯಲಿದೆ ಎಂಬ ಸುದ್ದಿ ರೈತರಿಗೆ ಆಘಾತವನ್ನುಂಟು ಮಾಡಿದೆ.

ಭೂತಾಯಿಗೆ ಉಡಿ ತುಂಬಿ, ಚರಗ ಚೆಲ್ಲಿ ಪೂಜೆ ಸಲ್ಲಿಸಿ, ಉತ್ತಮ ಮಳೆ-ಬೆಳೆಗಾಗಿ ಭೂತಾಯಿಯಲ್ಲಿ ಪ್ರಾರ್ಥಿಸುವ ಈ ಹಬ್ಬದ ದಿನ ಸಿಂಗರಿಸಿದ ಎತ್ತಿನ ಚಕ್ಕಡಿ, ಟ್ರ್ಯಾಕ್ಟರ್, ಕಾರು, ಟಂಟಂ, ಬೈಕ್ ವಾಹನಗಳಲ್ಲಿ ಹೊಸ ಉಡುಗೆ-ತೊಡುಗೆ ತೊಟ್ಟು ಹೊರಟಿರುವ ಭೂಮಿಪುತ್ರರ ಸಾಲು ನೋಡುವುದೇ ಚಂದ. ದಾರಿಯ ಮಧ್ಯೆ ಅಲಂಕರಿಸಿದ ಎತ್ತುಗಳು, ಕೊರಳಲ್ಲಿ ಕಟ್ಟಿದ ಗಜ್ಜೆಯ ನಾದ, ಹಳ್ಳಿ ಸೊಗಡಿನ ಜಾನಪದ ಗೀತೆಗಳ ನಿನಾದ ಭೂತಾಯಿ ಜಾತ್ರೆ ಎಂದೇ ಬಿಂಬಿಸುವಂತಿರುತ್ತದೆ. ಉಡಿ ತುಂಬಿ, ಪೂಜೆ ಸಲ್ಲಿಸಿದ ಬಳಿಕ ಎಲ್ಲರೂ ಸೇರಿ ಸಾಂಪ್ರದಾಯಿಕ ಆಹಾರ ಸವಿಯುತ್ತಾರೆ. ಆದರೆ ಈ ಸಂಭ್ರಮ-ಸವಿಯನ್ನು ಮಳೆರಾಯ ಕಸಿದುಕೊಂಡಂತಾಯಿತು.

> ಕಳೆದ ವರ್ಷ ಬರಗಾಲದಿಂದ, ಈ ವರ್ಷ ಅತಿವೃಷ್ಟಿಯಿಂದ ಬೆಳೆಗಳು ಹಾಳಾಗಿ ಮತ್ತೆ ಮತ್ತೆ ಸಂಕಷ್ಟಕ್ಕೆ ಸಿಲುಕಿ ಒದ್ದಾಡುತ್ತಿದ್ದೇವೆ. ಈ ವರ್ಷವಾದರೂ ಉತ್ತಮ ಬೆಳೆ ಬರುತ್ತದೆ ಎಂಬ ಆಶಾಭಾವನೆಯಿಂದ ಲಕ್ಷಾಂತರ ರೂ ಸಾಲ-ಸೋಲ ಮಾಡಿ ಬೆಳೆದಿದ್ದ ಮುಂಗಾರಿನ ಬೆಳೆ ಜಲಾವೃತಗೊಂಡಿವೆ. ಹಿಂಗಾರಿಗೆ ಸಂಪೂರ್ಣ ಹಿನ್ನಡೆಯಾಗಿದೆ. ಇದರ ನಡುವೆಯೇ ಬರುವ ಎಲ್ಲ ಹಬ್ಬಗಳನ್ನು ಸಂಪ್ರದಾಯ ಬಿಡಬಾರದೆಂಬ ಅನಿವಾರ್ಯತೆಯಿಂದ ಆಚರಿಸುತ್ತಿದ್ದೇವೆ. ಸರ್ಕಾರ ರೈತರು ಕಟ್ಟಿರುವ ಬೆಳೆ ವಿಮೆಯ ಜೊತೆಗೆ ಬೆಳೆಹಾನಿ ಪರಿಹಾರ, ಸಹಾಯಧನ ಕಲ್ಪಿಸಿ ಸಂಕಷ್ಟಲ್ಲಿರುವ ರೈತರಿಗೆ ಕಿಂಚಿತ್ತಾದರೂ ಆಸರೆಯಾಗಬೇಕು.
>
> **– ದೇವಣ್ಣ ಬಲಿಗಾರ, ಚಂದ್ರಶೇಖರ ಮೆಕ್ಕಿ.**
> ರೈತರು, ಲಕ್ಷ್ಮೇಶ್ವರ.

# ವಾಲ್ಮೀಕಿ ರಾಮಾಯಣ ಕೇವಲ ಕಥೆಯಲ್ಲ



■ವಿಜಯಸಾಕ್ಷಿ ಸುದ್ದಿ, ಡಂಬಳ

ರಾಮಾಯಣ ಎನ್ನುವ ಮಹಾನ್ ಗ್ರಂಥ ನೀಡಿರುವ ವಾಲ್ಮೀಕಿ ಮಹರ್ಷಿಯವರ ಕೊಡುಗೆ ಅಪಾರವಾಗಿದೆ ಎಂದು ಅಂಗನವಾಡಿ ಕಾರ್ಯಕರ್ತೆ ಸುಶೀಲಾ ಚಲವಾದಿ ಹೇಳಿದರು.

ಡಂಬಳ ಗ್ರಾಮದ 10ನೇ ಅಂಗನವಾಡಿ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ವಾಲ್ಮೀಕಿಯವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ರಾಮಾಯಣ ಕೇವಲ ಕತೆಯನ್ನಷ್ಟೇ ಹೇಳುವುದಿಲ್ಲ. ಅದರಲ್ಲಿ ಧರ್ಮೋಪದೇಶವಿದೆ. ಆಯುರ್ವೇದ ವೈದ್ಯ ಪದ್ಧತಿಯ ವಿಶ್ಲೇಷಣೆ ಇದೆ. ಅಂದಿನ ಕಾಲದ ಭಾರತದಲ್ಲಿನ ಇಡೀ ಪರಂಪರೆಯನ್ನು ನಾವು ಕಾಣಬಹುದಾಗಿದೆ. ಅಂತಹ ಮಹಾನ್ ಗ್ರಂಥದಿಂದ ಭಾರತದ ಹಿರಿಮೆ ಹೆಚ್ಚಳವಾಗಿದೆ ಎಂದು ಹೇಳಿದರು.

ಮಂಜು ತಳವಾರ ಮಹರ್ಷಿ ವಾಲ್ಮೀಕಿ ಅವರ ಭಾವಚಿತ್ರವನ್ನು ಅಂಗನವಾಡಿಗೆ ಕೊಡುಗೆಯಾಗಿ ನೀಡಿದರು. ಕಾರ್ಯಕ್ರಮದಲ್ಲಿ ರಾಮರಾಯಪ್ಪ ಮಾನೆ, ಮುರ್ತುಜಾ ತಾಂಬೋಟಿ, ಮಳ್ಳಪ್ಪ ಒಂಟಲಭೋವಿ, ರಿಯಾಜ ಕಾಸ್ತಾರ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka